ಸಂಪುಟ : 10 ಸಂಚಿಕೆ: 283 ಪುಟ : 4+2 ಬೆಲೆ: 3.00 ಗುರುವಾರ ಡಿಸೆಂಬರ್ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 283 Pages : 4+2 Price : 3.00 Thursday December 25 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ–90 ದಿನಗಳ ಡ್ರೈವ್

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ 2–01–2026ರಿಂದ ನಡೆಯಲಿರುವ ವಿಶೇಷ ಅಭಿಯಾನ–ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ–90 ದಿನಗಳ ಡ್ರೈವ್‌ನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗುತ್ತಿದೆ.

ಸದರಿ ಅಭಿಯಾನದಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು–ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟಾರು ಅಪಘಾತ ನ್ಯಾಯಾಧೀಕರಣದ ಪ್ರಕರಣಗಳು, ಚೆಕ್ ಅಮಾನ್ಯದ ಪ್ರಕರಣಗಳು, ವಾಣಿಜ್ಯ ಪ್ರಕರಣಗಳು, ಸೇವಾ ಪ್ರಕರಣಗಳು, ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ಗ್ರಾಹಕ ವ್ಯಾಜ್ಯ ಪ್ರಕರಣಗಳು, ಡಿ.ಆರ್.ಟಿ ಪ್ರಕರಣಗಳು, ಪಾಲುದಾರಿಕೆ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಸುವರ್ಣಾವಕಾಶವಿದೆ.

ಪಕ್ಷಗಾರರು, ಸಾರ್ವಜನಿಕರು ತಮ್ಮ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದ್ದಲ್ಲಿ ನ್ಯಾಯಾಲಯಗಳಿಂದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಕ್ಕೆ ಸೂಚಿಸಿಕೊಂಡಲ್ಲಿ ಅಂತಹ ಪ್ರಕರಣಗಳಲ್ಲಿ ಉಭಯ ಪಕ್ಷಗಾರರನ್ನು ಕರೆಸಿಕೊಂಡು ಜಿಲ್ಲಾ ನ್ಯಾಯಾಲಯದ ಸಮುಚ್ಛಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲೂಕು ನ್ಯಾಯಾಲಯಗಳ ಅವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಬಹುದಾಗಿದ್ದು, ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನಾಗವೇಣಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.27ಕ್ಕೆ ಬೆಟಗೇರಿಯಲ್ಲಿ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕೆಲಸ ಕೈಗೊಳ್ಳುವುದರಿಂದ ಡಿ. 27ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಬೆಟಗೇರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ಕೈಗಾರಿಕಾ, ನಿರಂತರಜ್ಯೋತಿ, ಇ.ಐ.ಪಿ, ಸೋಲಾರ ಐ.ಪಿ.ಪಿ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

### ಕಾಂಗ್ರೆಸ್ ಸರ್ಕಾರ ಅನುಷ್ಠಾನಕ್ಕೆ ತರುತ್ತಿರುವ ಕರ್ನಾಟಕ ದ್ವೇಷ ಭಾಷಣ ಪ್ರತಿಬಂಧಕ ವಿಧೇಯಕ್ಕೆ ಬಿಜೆಪಿ ವಿರೋಧ

# ದ್ವೇಷ ಭಾಷಣಕ್ಕೆ ನೀಡಿರುವ ವ್ಯಾಖ್ಯಾನವೇ ಅಸ್ಪಷ್ಟ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು ಅನುಷ್ಠಾನಕ್ಕೆ ತರುತ್ತಿರುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ವಿಧೇಯಕ–2025 ಭಾರತದ ಸಂವಿಧಾನಕ್ಕೆ ವಿರುದ್ಧವಾಗಿದ್ದು, ಇದನ್ನು ಜಾರಿಗೊಳಿಸದಂತೆ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ನಗರದ ಗಾಂಧಿ ವೃತ್ತದಲ್ಲಿ ಬಿಜೆಪಿ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಿದರು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಇದು ನಾಗರಿಕರ ಮೂಲ ಹಕ್ಕುಗಳನ್ನು ಕಸಿದುಕೊಳ್ಳುತ್ತದೆ. ಸಂವಿಧಾನದ 19(1)ಪರಿಚ್ಛೇದ, (2) ಪರಿಚ್ಛೇದದಡಿ ವಾಕ್ ಅಥವಾ ಅಭಿವ್ಯಕ್ತಿ ಸ್ವಾತಂತ್ರ್ಯದ ಉಲ್ಲಂಘನೆ ಆಗಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದಡಿ ನೀಡಿದ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಕಾಂಗ್ರೆಸ್ ಸರಕಾರ ಕಿತ್ತುಕೊಳ್ಳುತ್ತಿದೆ. ಇದು ಸರ್ಕಾರದ ವಿರುದ್ಧ ಮಾತನಾಡುವವರ ಬಾಯಿ ಮುಚ್ಚಿಸುವ ಸಾಧನ. ಇದರಡಿ ದ್ವೇಷ ಭಾಷಣಕ್ಕೆ ನೀಡಿರುವ ವ್ಯಾಖ್ಯಾನವೇ ಅಸ್ಪಷ್ಟವಾಗಿದೆ. ಸರ್ಕಾರದ ನೀತಿಗಳ ವಿರುದ್ಧ ಟೀಕೆ, ಸಾಮಾಜಿಕ ಚರ್ಚೆ, ವ್ಯಂಗ್ಯ ಮಾಡುವುದು ಅಥವಾ ಸತ್ಯವನ್ನು ಹೇಳುವುದನ್ನೂ ಕೂಡ ದ್ವೇಷ ಎಂದು ಪರಿಗಣಿಸುವ ಅಪಾಯವಿದೆ. ಜನರು ಭಯದಿಂದ ಮಾತನಾಡದೆ ಇರುವುದು ಸರ್ಕಾರದ ಉದ್ದೇಶವೇ



ಎಂಬ ಪ್ರಶ್ನೆ ಮೂಡುತ್ತಿದೆ ಎಂದು ಆರೋಪಿಸಿದರು.

ಜಿಲ್ಲಾ ಪ್ರಧಾನಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ಈ ವಿಧೇಯಕದರಡಿ ಪ್ರತಿಬಂಧಕ ಕ್ರಮಗಳನ್ನು ಸಹ ಉಲ್ಲೇಖಿಸಲಾಗಿದೆ. ಪೊಲೀಸರು ಅಥವಾ ಅಧಿಕಾರಿಗಳು ಸಂಭಾವ್ಯ ಅಪರಾಧ ಎಂದು ಭಾವಿಸಿ ಮುಂಚಿತವಾಗಿ ಕ್ರಮ ಕೈಗೊಳ್ಳಬಹುದು. ಇದರಿಂದ ಪ್ರತಿಭಟನೆಗಳು ಸಭೆಗಳು ಅಥವಾ ಸಾಮಾಜಿಕ ಚಳವಳಿಗಳನ್ನು ತಡೆಯುವ ಉದ್ದೇಶ ಇದ್ದಂತಿದೆ. ಈವಿಧೇಯಕದಿಂದ ಸಾಮಾಜಿಕ ಕಾರ್ಯಕರ್ತರು, ಪತ್ರಕರ್ತರು ಹೆಚ್ಚು ತೊಂದರೆಗೆ ಸಿಲುಕುತ್ತಾರೆ. ಪ್ರಜಾಪ್ರಭುತ್ವದಲ್ಲಿ ಮಾಧ್ಯಮ ಮತ್ತು ಜನರ ಧ್ವನಿಯನ್ನು ನಾಶಪಡಿಸುವ ಇಂತಹ ಕಾಯಿದೆ ಜಾರಿಯಾಗಬಾರದು ಎಂದರು. ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ ಮತ್ತು ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಮಾತನಾಡಿ, ಅನ್ಯಾಯ ಅಥವಾ ಸರ್ಕಾರದ ತಪ್ಪುಗಳ ಬಗ್ಗೆ ಮಾತನಾಡಿದರೆ ಭಾವನಾತ್ಮಕ ಹಾನಿ ಎಂದು ಆರೋಪಿಸಿ ಬಂಧಿಸಲು ಇದು ಪೊಲೀಸರಿಗೆ ಅಧಿಕಾರ ನೀಡುತ್ತದೆ. ಪತ್ರಕರ್ತರ ತನಿಖಾ ವರದಿಗಳು ಕೇಸಿನ ತೂಗುಗತ್ತಿ ಎದುರಿಸಬೇಕಾಗುತ್ತದೆ. ಸಾಮಾಜಿಕ ಮಾಧ್ಯಮದಲ್ಲಿ ಹಾಸ್ಯ ಅಥವಾ ಟೀಕೆಯನ್ನು ದ್ವೇಷ ಎಂದು ಕರೆದು ಬ್ಲಾಕ್ ಮಾಡಬಹುದು, ಕಾನೂನು ಕ್ರಮ ಕೈಗೊಳ್ಳಬಹುದು. ಈ ದೇಶದ ನಾಗರಿಕರ ಸಂವಿಧಾನದ ಹಕ್ಕುಗಳನ್ನು ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯ. ಈ ಕಾನೂನು ನಾಗರಿಕರ ಸ್ವಾತಂತ್ರ್ಯವನ್ನು ಕಿತ್ತುಕೊಳ್ಳುತ್ತದೆ ಎಂದು ಆರೋಪಿಸಿದರು.

ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಮಾತನಾಡಿ, ಈ ವಿಧೇಯಕದ ಮೂಲಕ ಕಾಂಗ್ರೆಸ್ ಸರ್ಕಾರವು ಪ್ರತಿಪಕ್ಷಗಳು, ಮಾಧ್ಯಮದವರ ಮೇಲೆ ನಿಯಂತ್ರಣ ಹೇರುವುದು, ಹೆದರಿಸುವ ಕೆಲಸವನ್ನು ಮಾಡುತ್ತಿದೆ. ಇದರ ವಿರುದ್ಧ ಜಾಗೃತಿ ಮೂಡಿಸಲು ಈ ಪ್ರತಿಭಟನೆ ನಡೆಸುತ್ತಿದ್ದೇವೆ ಎಂದರು.

> ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಕರೀಗೌಡ್ರ ಮಾತನಾಡಿ, ಇದು ಪ್ರಜಾಪ್ರಭುತ್ವದ ಮೂಲತತ್ವಕ್ಕೆ ಹಾನಿಯಷ್ಟೇ ಅಲ್ಲದೆ, ಪ್ರಜಾಪ್ರಭುತ್ವದ ಕತ್ತು ಹಿಸುಕುವ ಯತ್ನಯಾಗಿದೆ. ಈ ಕಾನೂನು ಪೊಲೀಸರಿಗೆ ಮತ್ತು ಸರ್ಕಾರಕ್ಕೆ ನಿರಂಕುಶ ಅಧಿಕಾರ ನೀಡುತ್ತದೆ. ಕಾಯ್ದೆ ಹೇಳುವಂತೆ ಇಲ್ಲಿನ ಅಪರಾಧಗಳಿಗೆ ಜಾಮೀನು ಇಲ್ಲ. ಜನಸಾಮಾನ್ಯರನ್ನು ಅಪರಾಧಿಗಳಾಗಿ ಮಾಡುವ ಈ ಕೀಳು ಮಟ್ಟದ ಕಾಯಿದೆ ನಮಗೆ ಬೇಕೇ ಎಂಬ ಪ್ರಶ್ನೆ ಮೂಡಿದೆ ಎಂದರು.

▶▶ 3ನೇ ಪುಟಕ್ಕೆ

### ಡಂಬಳ ಹೋಬಳಿಯಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ ಸರ್ಕಾರವನ್ನು ಬೆಂಬಲಿಸಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಡಾ.ಬಾಬಾಸಾಹೇಬ ಅಂಬೇಡ್ಕರ್ ದೇಶದ ಪ್ರಜೆಗಳ ಬದುಕು ಆರ್ಥಿಕವಾಗಿ ಸಮಾನತೆಯ ಮೂಲಕ ಮುಂದೆ ಬರಬೇಕು ಎನ್ನುವ ಆಶಾಭಾವನೆ ಹೊಂದಿದ್ದರು. ಆ ಹಿನ್ನೆಲೆಯಲ್ಲಿ ರಾಜ್ಯದ ಕಾಂಗ್ರೆಸ್ ಸರಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವುದರ ಮೂಲಕ ಪ್ರಜೆಗಳನ್ನು ಆರ್ಥಿಕ ಪ್ರವಾಹಿನಿಗೆ ತರಲು ಶ್ರಮಿಸುತ್ತಿದೆ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಜಂತ್ಲಿ ಶಿರೂರ ಗ್ರಾಮ ಪಂಚಾಯಿತಿ ಕಟ್ಟಡದ ಉದ್ಘಾಟನೆ, ಗೋದಾಮು, ಮೇವುಂಡಿ ಗ್ರಾಮದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಿಬ್ಬಂದಿಗಳಿಗೆ ಕೊಠಡಿ ನಿರ್ಮಾಣ, ವಾಲ್ಮೀಕಿ ಸಮುದಾಯ ಭವನ, ಶ್ರೀ ಬಸವಣ್ಣ ದೇವಸ್ಥಾನದ ಜೀರ್ಣೋದ್ಧಾರ, ಶ್ರೀ ಕೃಪೇಶ್ವರ ದೇವಸ್ಥಾನದ ಮುಂದುವರೆದ ಕಾಮಗಾರಿ, ಮೂಲಸೌಕರ್ಯ ಅಭಿವೃದ್ಧಿ, ಡೋಣಿ ಗ್ರಾಮದಲ್ಲಿ ಡೋಣಿ–ಹಿರೇವಡ್ಡಟ್ಟಿ ರಸ್ತೆ ಸುಧಾರಣೆ, ಗೂಳಿ ಬಸವೇಶ್ವರ ದೇವಸ್ಥಾನದ ಹತ್ತಿರ ಹಾಗೂ ಡಿಪಿಇಪಿ ಶಾಲೆಯ ಹತ್ತಿರು ಇರುವ ವಿದ್ಯಾನಗರದಲ್ಲಿ ಸಿ.ಸಿ ರಸ್ತೆ ನಿರ್ಮಾಣ, ಆರೋಗ್ಯ ಮತ್ತು ಕ್ಷೇಮ ಕೇಂದ್ರ ನಿರ್ಮಾಣ, ಕೆ.ಜಿ.ಎಸ್ ಶಾಲೆಯ 2 ಹೊಸ ಕೊಠಡಿಗಳು, ಸರ್ಕಾರಿ ಆಯುರ್ವೇದ



ಚಿಕಿತ್ಸಾಲಯದ ನವೀಕರಣ, ಸರಕಾರಿ ಪದವಿಪೂರ್ವ ಕಾಲೇಜುಗಳ ಕೊಠಡಿ ದುರಸ್ತಿ, ಜಿ.ಎಚ್.ಪಿ.ಎಸ್ ಶಾಲೆಯ 2 ಕೊಠಡಿಗಳ ರೂಪ ಬದಲಾವಣೆ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಡೋಣಿಯ 99 ಕುಟುಂಬಗಳಿಗೆ, ಅತ್ತಿಕಟ್ಟಿ, ಮುರಡಿ ತಾಂಡ ಸೇರಿದಂತೆ ವಿವಿಧ ಗ್ರಾಮಗಳನ್ನು ಉಪ ಗ್ರಾಮಗಳನ್ನಾಗಿ ಘೋಷಣೆ ಮಾಡಲಾಗುವುದು. ಇವೆಲ್ಲವನ್ನೂ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರವನ್ನು ಮುಂದಿನ ಚುನಾವಣೆಗಳಲ್ಲಿ ಎಲ್ಲರೂ ಬೆಂಬಲಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಂತ್ಲಿ ಶಿರೂರ ಗ್ರಾ.ಪಂ ಅಧ್ಯಕ್ಷೆ ಜೈತುನಬಿ ಬಳ್ಳಾರಿ, ಉಪಾಧ್ಯಕ್ಷ ರವಿ ದೊಡ್ಡಮನಿ, ಗ್ರಾ.ಪಂ ಅಧ್ಯಕ್ಷೆ ಹುಲಿಗೆಮ್ಮ ಅಳವಂಡಿ, ದುರಗವ್ವ ಯಮನೂರಪ್ಪ ತಳಗೇರಿ, ಡಿ.ಡಿ. ಮೋರನಾಳ, ಗ್ರಾ.ಪಂ ಕಟ್ಟಡದ ಭೂದಾನಿ ಹೇಮಣ್ಣ ಪೂಜಾರ, ಇಓ ವಿಶ್ವನಾಥ ಹೊಸಮನಿ, ತಹಸೀಲ್ದಾರ ಯರಿಸ್ವಾಮಿ ಪಿ.ಎಸ್, ಬಸವರಡ್ಡಿ ಬಂಡಿಹಾಳ, ಅಬ್ದುಲಸಾಬ ಕಲಕೇರಿ, ಮಳ್ಳಪ್ಪ ಜೋಂಡಿ, ಮಹೇಶ ಗಡಗಿ, ಕಾಶಪ್ಪ ಹೊನ್ನೂರ, ಗೋಣಿಬಸಪ್ಪ ಕೊರ್ಲಹಳ್ಳಿ, ಬಾಬುಸಾಬ ಮೂಲಿಮನಿ, ಯಮನಪ್ಪ ಚುಂಗಿನ, ಬಸುರಾಜ ಶಿರೋಳ, ಶರಣು ಬಂಡಿಹಾಳ, ಬಸುರಾಜ ಮೇವುಂಡಿ, ಈಶಪ್ಪ ಓಲಿ, ಸೋಮು ಹೈತಾಪೂರ, ರಾಚಪ್ಪ ಗಾಳಪ್ಪನವರ, ಪಿಡಿಓ ವಸಂತ ಕೋಕಾಕ, ವಿರೇಶ ಅವಾರಿ, ಈರಣ್ಣ ಯಳವತ್ತಿ, ಸೋಮಣ್ಣ ಹಳ್ಳಿಕೇರಿ, ಹೇಮಂತ ಹಾರೂಗೇರಿ, ಜಗದೀಶ ಮೇನಳ್ಳಿ, ಬಸುರಾಜ ನಾರಾಯಣಪುರ, ಶರಣಬಸಪ್ಪ ಮುದಿಯಜ್ಜನವರ, ಕಾಶಪ್ಪ ಅಳವಂಡಿ, ವೀರೇಶ ಸಿದ್ನೆಕೊಪ್ಪ, ಈರಣ್ಣ ಯಳವತ್ತಿ, ಯಮನಪ್ಪ ಇಳಗೇರ, ಮಹೇಶ ಕೊರ್ಲಹಳ್ಳಿ, ಮಹಾದೇವಪ್ಪ ಗುಂಜಿ, ಬಸು ಬೇಟಗೇರಿ, ಹನಮಂತಪ್ಪ ಗೋಡಿ, ಯಮನೂರಪ್ಪ ಅರೂಣಸಿ, ಶಿವಕುಮಾರ ಉದಂಡಿ, ಕೋಟ್ರಪ್ಪ ಸ್ವಾಗಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಇದ್ದರು.

> ಮುಂಡರಗಿ ತಾಲೂಕಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಶೇ. 98.5ರಷ್ಟು ಸಾಧನೆಯಾಗಿದೆ. ಅನ್ನಭಾಗ್ಯದಡಿ 36640 ಫಲಾನುಭವಿಗಳು ಲಾಭ ಪಡೆದುಕೊಳ್ಳುತ್ತಿದ್ದು, ಶಕ್ತಿ ಯೋಜನೆಯಡಿ 5 ಕೋಟಿ 55 ಲಕ್ಷ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ. 212 ಯುವಕರಿಗೆ ಯುವ ನಿಧಿ ಯೋಜನೆಗಳನ್ನು ಕೊಡುವುದರ ಮೂಲಕ ಯೋಜನೆ ತಲುಪಿಸಲಾಗಿದೆ. ಆರ್ಥಿಕವಾಗಿ ಹಿಂದುಳಿದವರನ್ನು ಮುಖ್ಯ ಪ್ರವಾಹಿನಿಗೆ ತರಲು ಸರಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

### ದ್ವೇಷ ಭಾಷಣ ವಿಧೇಯಕವನ್ನು ಜಾರಿಗೊಳಿಸದಿರಲು ರಾಜ್ಯಪಾಲರಿಗೆ ಮನವಿ

# ರಾಜ್ಯದಲ್ಲಿ ತುರ್ತು ಪರಿಸ್ಥಿತಿ ಹೇರಿಕೆಯಾಗುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ವಾಕ್ ಸ್ವಾತಂತ್ರ್ಯ ಹತ್ತಿಕ್ಕುವ ನಿಟ್ಟಿನಲ್ಲಿ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ವಿದೇಯಕ–2025 ತರುತ್ತಿರುವುದರಿಂದ ರಾಜ್ಯದಲ್ಲಿ ಒಂದು ರೀತಿಯ ತುರ್ತು ಪರಿಸ್ಥಿತಿ ಹೇರಿಕೆಯ ವಾತಾವರಣ ನಿರ್ಮಾಣ ಮಾಡುತ್ತಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಅಕ್ರೋಶ ವ್ಯಕ್ತಪಡಿಸಿದರು.

ಅವರು ಪಟ್ಟಣದಲ್ಲಿ ಬಿಜೆಪಿ ಶಿರಹಟ್ಟಿ ಮಂಡಳ, ಲಕ್ಷ್ಮೇಶ್ವರ ನಗರ ಘಟಕದ ವತಿಯಿಂದ ಸರಕಾರ ಜಾರಿಗೆ ತರುತ್ತಿರುವ ದ್ವೇಷ ಭಾಷಣ ವಿಧೇಯಕವನ್ನು ಜಾರಿಗೆ ತರದಂತೆ ಪಟ್ಟಣದ ತಹಸೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿ ಮಾತನಾಡಿದರು.

ಜನರ ವಾಕ್ ಸ್ವಾತಂತ್ರ್ಯವನ್ನು ಕಾಂಗ್ರೆಸ್ ಸರಕಾರ ಕಸಿದುಕೊಳ್ಳುತ್ತಿದೆ. ಸರ್ಕಾರ ಆಡಳಿತ ಮಾಡುವಲ್ಲಿ ಸಂಪೂರ್ಣ ವಿಫಲವಾಗಿದ್ದು, ಆರ್ಥಿಕ ಬಿಕ್ಕಟ್ಟು ಎದುರಾಗಿದೆ. ಇವುಗಳನ್ನು ಇಟ್ಟುಕೊಂಡು ಯಾರೂ ಸಹ ಸರಕಾರದ ವಿರುದ್ಧ ಮಾತನಾಡಬಾರದು, ಮಾತನಾಡಿದರೆ ಕೇಸು ದಾಖಲಿಸುವ ಷಡ್ಯಂತ್ರವಾಗಿದೆ ಎಂದು ಆರೋಪಿಸಿದರು.



ಶಿರಹಟ್ಟಿ ಬಿಜೆಪಿ ಮಂಡಳದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಹಾಗೂ ಯುವ ಮುಖಂಡ ನವೀನ ಹಿರೇಮಠ ಮಾತನಾಡಿ, ಈ ವಿಧೇಯಕದಿಂದ ಕಾಂಗ್ರೆಸ್ ಸರ್ಕಾರವು ಪ್ರತಿಪಕ್ಷಗಳನ್ನು ಹೆದರಿಸುವ ಕೆಲಸ ಮಾಡುತ್ತಿದೆ. ಇಂತಹ ನೂರು ಕಾಯ್ದೆಗಳನ್ನು ಜಾರಿಗೆ ತಂದರೂ ಸಹ ನಾವು ಹೆದರುವ ಪ್ರಶ್ನೆಯೇ ಇಲ್ಲ. ಜನಸಾಮಾನ್ಯರನ್ನು ಅಪರಾಧಿಗಳನ್ನಾಗಿ ಮಾಡುವ ಈ ಕೀಳು ಮಟ್ಟದ ಕಾಯ್ದೆ ಬೇಡ. ಇದರ ಬಗ್ಗೆ ಕಾನೂನು ಹೋರಾಟವನ್ನು ಮಾಡುತ್ತೇವೆ ಎಂದರು.

ಗ್ರೇಡ್–2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಜಾನು ಲಮಾಣಿ, ನಿಂಗಪ್ಪ ಕರ್ಜಕಣ್ಣವರ, ಚಂಬಣ್ಣ ಬಾಳಿಕಾಯಿ, ಎಂ.ಆರ್. ಪಾಟೀಲ, ಶಿವಣ್ಣ ಲಮಾಣಿ, ಗಂಗಾಧರ ಮೆಣಸಿನಕಾಯಿ, ಬಸವರಾಜ ಚಕ್ರಸಾಲಿ, ಪ್ರವೀಣ ಬೋಮಲೆ; ಮಹಾದೇವಪ್ಪ ಅಣ್ಣಿಗೇರಿ, ವಿಜಯ ಕುಂಬಾರ, ಅಶೋಕ ಶಿರಹಟ್ಟಿ, ಶಿದ್ದನಗೌಡ ಬಳ್ಳೊಳ್ಳಿ, ಈರಣ್ಣ ಪೂಜಾರ, ಭೀಮಣ್ಣ ಯಂಗಾಡಿ, ವಿನಾಯಕ ವಗ್ಗಣ್ಣವರ, ರಮೇಶ ಲಮಾಣಿ, ರಾಮು ನಾಯಕ, ಹನುಮಂತ ಜಾಲಿಮರದ, ಮಂಜುನಾಥ ಗಜಾಕೋಶ, ಪುಂಡಲೀಕ ಲಮಾಣಿ, ವಿಶಾಲ ಬಟಗುರ್ಕಿ, ಸಂತೋಷ ಜಾವೂರ, ಉಳವೇಶಗೌಡ ಪಾಟೀಲ ರಮೇಶ ಹಾಳದೊಟದ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

> ಸಂವಿಧಾನದಲ್ಲಿ ಡಾ. ಅಂಬೇಡ್ಕರ್ ಕೊಟ್ಟಿರುವ ವಾಕ್ ಸ್ವಾತಂತ್ರ್ಯವನ್ನು ಹತ್ತಿಕ್ಕಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆ. ಅಂದು ಇಂದಿರಾ ಗಾಂಧಿ ದೇಶದಲ್ಲಿ ಎಮರ್ಜೆನ್ಸಿ ಘೋಷಣೆ ಮಾಡಿದ್ದರು.
>
> ಅಂತೆಯೇ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಎಮರ್ಜೆನ್ಸಿ ಘೋಷಣೆ ಮಾಡುತ್ತಿದೆ. ಪ್ರಜಾಪ್ರಭುತ್ವದಲ್ಲಿ ಮಾಧ್ಯಮ ಮತ್ತು ಜನರ ಧ್ವನಿಯನ್ನು ನಾಶಪಡಿಸುವ ಇಂಥ ಕಾಯಿದೆ ಯಾವ ಕಾರಣಕ್ಕೂ ಜಾರಿಯಾಗಬಾರದು ಎಂದು ಶಾಸಕ ಡಾ. ಚಂದ್ರು ಲಮಾಣಿ ಸರಕಾರಕ್ಕೆ ಎಚ್ಚರಿಕೆ ನೀಡಿದರು.

# ಕಾಂಗ್ರೆಸ್ ಭವನಕ್ಕೆ ನಿವೇಶನದ ದಾನಪತ್ರ ಹಸ್ತಾಂತರ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯಲ್ಲಿ ನಿರ್ಮಾಣವಾಗಲಿರುವ ಕಾಂಗ್ರೆಸ್ ಭವನಕ್ಕೆ ನಿವೇಶನದ ದಾನಪತ್ರವನ್ನು ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ವಿಜಯ ಮುಳಗುಂದ ಹಾಗೂ ಎಲ್.ನಾರಾಯಣ ಅವರಿಗೆ ಬುಧವಾರ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸುಜಾತಾ ದೊಡ್ಡಮನಿ, ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ ಅವರು ರಾಜ್ಯಾದ್ಯಂತ 100 ತಾಲೂಕಾ ಕೇಂದ್ರಗಳಲ್ಲಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ ದೃಢ ಸಂಕಲ್ಪ ಮಾಡಿದ್ದು, ಇದನ್ನು ನಮ್ಮ ಕ್ಷೇತ್ರದಲ್ಲಿ ಸಾಕಾರಗೊಳಿಸುವುದಕ್ಕೆ ಇಂದು ನಿವೇಶನವನ್ನು ಹಸ್ತಾಂತರಿಸಲಾಗಿದೆ. ಕಳೆದ 25 ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠಾವಂತ ಕಾರ್ಯಕರ್ತೆಯಾಗಿ ಸೇವೆ ಸಲ್ಲಿಸುತ್ತಾ ಬರುತ್ತಿದ್ದೇನೆ. ಈ ಹಿಂದೆ ಜಿಲ್ಲಾ ಪಂಚಾಯಿತಿ ಅಧ್ಯಕ್ಷೆಯಾಗಿ, ಹಾಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡುತ್ತಿದ್ದೇನೆ. ಪಕ್ಷಕ್ಕಾಗಿ ಅಳಿಲು ಸೇವೆಯನ್ನು ಸಲ್ಲಿಸುವ ಸಮಯ ನನಗೆ ಒದಗಿ ಬಂದಿದ್ದರಿಂದ ಪಕ್ಷದ ಹಿರಿಯರ, ಕಾರ್ಯಕರ್ತರ ಸಮ್ಮುಖದಲ್ಲಿ ನಿವೇಶನದ ದಾನಪತ್ರವನ್ನು ಹಸ್ತಾಂತರಿಸಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಶಿರಹಟ್ಟಿ ಬ್ಲಾಕ್ ಅಧ್ಯಕ್ಷ ಹುಮಾಯೂನ್ ಮಾಗಡಿ, ದೇವಪ್ಪ ಲಮಾಣಿ, ವೀರಯ್ಯ ಮಠಪತಿ, ಅಜ್ಜು ಪಾಟೀಲ, ಮಾಬುಸಾಬ ಲಕ್ಷ್ಮೇಶ್ವರ, ಸೋಮನಗೌಡ ಮರಿಗೌಡ್ರ ಮುಂತಾದವರು ಉಪಸ್ಥಿತರಿದ್ದರು.

## ಕರುನಾಡ ಸುವರ್ಣ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಸಾಹಿತಿ ಶ್ರೀಕಾಂತ ಹಾದಿಮನಿ ರಾಜ್ಯಮಟ್ಟದ ಕರುನಾಡ ಸುವರ್ಣ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಕೇಂದ್ರ ಸರಕಾರದಿಂದ ಮಾನ್ಯತೆ ಪಡೆದ ಅನ್ನಪೂರ್ಣೇಶ್ವರಿ ಹ್ಯುಮ್ಯಾನಿಟಿ ಫೌಂಡೇಶನ್ ಹಾಗೂ ವಿಶ್ವಕರ್ಮ ಅಭಿವೃದ್ಧಿ ಫೌಂಡೇಶನ್ ಬೆಂಗಳೂರು ಇದರ ವತಿಯಿಂದ ಕೊಡಮಾಡುವ ಪ್ರಶಸ್ತಿ ಇದಾಗಿದ್ದು, ಶ್ರೀಕಾಂತ ಹಾದಿಮನಿ ಅವರು ಬರೆದ ಕಥೆ, ಕವನ, ಲೇಖನಗಳು ಧಾರವಾಡ ಆಕಾಶವಾಣಿ ಕೇಂದ್ರದಲ್ಲಿ ಪ್ರಸಾರಗೊಂಡಿದ್ದು, ಅವರ ಸಾಮಾಜಿಕ ಕ್ಷೇತ್ರಗಳಲ್ಲಿನ ಸೇವೆ, ಹೋರಾಟಗಳನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಡಿ. 28ರಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ನಯನ ಸಭಾಂಗಣದಲ್ಲಿ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಭರತನಾಟ್ಯ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕಲಾ ವೈಭವ ಸಾಂಸ್ಕೃತಿಕ ವಿವಿಧೋದ್ದೇಶಗಳ ಸಂಸ್ಥೆಯ ವತಿಯಿಂದ ಡಿ. 25ರಂದು ಸಂಜೆ 5.30ಕ್ಕೆ ಪಟ್ಟಣದ ರಂಭಾಪುರಿ ಜ.ವೀರ ಗಂಗಾಧರ ಸಮುದಾಯ ಭವನದಲ್ಲಿ ನಟರಾಜ ನರ್ತನ ಭರತನಾಟ್ಯ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಸಾಹಿತಿ, ರಾಜ್ಯಮಟ್ಟದ ಪ್ರಶಸ್ತಿ ಪುರಸ್ಕೃತೆ ಲಲಿತಕ್ಕ ಕೆರಿಮನಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ, ಹಿರಿಯ ಅರ್ಚಕರಾದ ಸಿದ್ದಲಿಂಗಯ್ಯ ಶ್ರೀಗಳು, ಕದಳಿ ಮಹಿಳಾ ವೇದಿಕೆ ಜಿಲ್ಲಾಧ್ಯಕ್ಷೆ ಸುಧಾ ಹುಚ್ಚಣ್ಣವರ, ವಿದುಷಿ ರಾಘವಿ ಜೋತಿಶ್ರೀ ಆಗಮಿಸಲಿದ್ದು, ಕಲಾ ವೈಭವದ ಮಕ್ಕಳು ಭರತನಾಟ್ಯವನ್ನು ಪ್ರಸ್ತುತಪಡಿಸಲಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷೆ ಭವ್ಯ ಕತ್ತಿ ತಿಳಿಸಿದ್ದಾರೆ.

### ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ-ಜನ ಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಆತ್ಮ ಸಂಯಮ ಆಧ್ಯಾತ್ಮದ ಅಡಿಪಾಯ



ಧರ್ಮ ರಕ್ಷಣೆಯಲ್ಲಿ ಮಹಿಳೆಯರ ಪಾತ್ರ ವಿಷಯವಾಗಿ ಬೆಂಗಳೂರಿನ ಎಸ್.ಜೆ.ಆರ್ ಮಹಿಳಾ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರೇಮಾ ಸಿದ್ಧರಾಜು ಮಾತನಾಡಿ, ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಗೆ ಅತ್ಯುನ್ನತ ಗೌರವ ಸ್ಥಾನವನ್ನು ಕೊಟ್ಟಿದ್ದಾರೆ.

ಈ ನಾಡಿನ ಸಂಸ್ಕತಿ, ಸಭ್ಯತೆ ಮತ್ತು ಆದರ್ಶಗಳನ್ನು ಉಳಿಸಿ-ಬೆಳೆಸಿಕೊಂಡು ಬಂದ ಜವಾಬ್ದಾರಿ ಮಹಿಳೆಯರ ಮೇಲಿದೆ. ವೀರಶೈವ ಧರ್ಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಮತ್ತು ಶರಣರು ವಿಶೇಷ ಧರ್ಮಾಚರಣೆಯನ್ನು ಕೊಟ್ಟಿರುವುದನ್ನು ಮರೆಯಲಾಗದೆಂದರು.

■ ವಿಜಯಸಾಕ್ಷಿ ಸುದ್ದಿ, ತುಮಕೂರು

ಭಾವೈಕ್ಯತೆ ಮತ್ತು ಆಧ್ಯಾತ್ಮ ಜ್ಞಾನ ಭಾರತದ ಉಸಿರು. ಜೀವನದ ಉನ್ನತಿಗೆ ಸಂಸ್ಕಾರ-ಸನ್ಮಾರ್ಗ ದರ್ಶನದ ಅವಶ್ಯಕತೆಯಿದೆ. ಆತ್ಮ ಸಂಯಮ ಆಧ್ಯಾತ್ಮ ಜ್ಞಾನದ ಅಡಿಪಾಯವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್‌ನಿಂದ ಸಂಘಟಿಸಿದ ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ-ಜನ ಜಾಗೃತಿ ಧರ್ಮ ಸಮಾರಂಭದ 2ನೇ ದಿನದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭೂಮಿಯಲ್ಲಿ ಬಿತ್ತಿದ ಬೀಜಕ್ಕೆ ನೀರು, ಗೊಬ್ಬರ ಮತ್ತು ರಕ್ಷಣೆ ಎಷ್ಟು ಅವಶ್ಯಕವೋ ಹಾಗೆಯೇ ನೀತಿಗೆ ಧರ್ಮವೂ ಅಷ್ಟೇ ಅವಶ್ಯಕವಾಗಿದೆ. ಸಾತ್ವಿಕ ಮತ್ತು ತಾತ್ವಿಕ ಹಿತಚಿಂತನೆಗಳನ್ನು ಬೋಧಿಸುವುದೇ ಗುರುವಿನ ಧರ್ಮ. ನಡೆದಾಡುವ ದಾರಿಯಲ್ಲಿ ಬಿದ್ದ ಕಲ್ಲು-ಮುಳ್ಳುಗಳನ್ನು ಎತ್ತಿ ಹಾಕುವುದೇ ನಿಜವಾದ ಧರ್ಮ. ಪರಿಶುದ್ಧವಾದ ಮತ್ತು ಪವಿತ್ರವಾದ ಜೀವನ ರೂಪಿಸಿಕೊಳ್ಳುವ ಧರ್ಮ ಪ್ರಜ್ಞೆ ಮತ್ತು ಆಚರಣೆ ಮುಖ್ಯ. ಮೌಲ್ಯಗಳು ಕಣ್ಮರೆಯಾಗುತ್ತಿರುವ ಸಂದಿಗ್ಧ ಸಂದರ್ಭದಲ್ಲಿ ಮತ್ತೆ ಅವುಗಳನ್ನು ಉಳಿಸಿ ಬೆಳೆಸುತ್ತ ಎಲ್ಲರೂ ಶ್ರಮಿಸುವ ಅವಶ್ಯಕತೆಯಿದೆ.

ಹೆತ್ತ ತಾಯಿ ಮತ್ತು ಹೊತ್ತ ಭೂಮಿ ಎಷ್ಟು ಮುಖ್ಯವೋ, ಅಷ್ಟೇ ಧರ್ಮವೂ ಮುಖ್ಯವಾಗಿದೆ. ವೀರಶೈವ ಧರ್ಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಜಾತಿ, ಮತ, ಪಂಥಗಳನ್ನು ಮೀರಿ ಉದಾತ್ತ ಜೀವನ ಮೌಲ್ಯಗಳನ್ನು ಬೋಧಿಸಿರುವುದನ್ನು ಯಾರೂ ಮರೆಯಬಾರದೆಂದರು.

ಬೆಳ್ಳಾವಿ ಮಠದ ಕಾರದ ವೀರಬಸವ ಸ್ವಾಮಿಗಳು ಮಾತನಾಡಿ, ಬಾಲ್ಯದಲ್ಲಿ ಜ್ಞಾನ ತಾರುಣ್ಯದಲ್ಲಿ ಸಂಪತ್ತು, ವೃದ್ಧಾಪ್ಯದಲ್ಲಿ ಪುಣ್ಯ ಸಂಪಾದಿಸಿಕೊಂಡು ಬದುಕಬೇಕಾಗಿದೆ. ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ, ಸಹನೆ, ದಯೆ ವೃದ್ಧಿಗೊಳ್ಳುತ್ತವೆ. ಶ್ರೀ ರಂಭಾಪುರಿ ಜಗದ್ಗುರುಗಳವರ ಧನುರ್ಮಾಸದ ಜ್ಞಾನ ಯಜ್ಞದಿಂದ ಭಕ್ತರ ಬಾಳಿಗೆ ಬೆಳಕು ಮೂಡಿ ಬರುವುದೆಂದರು.

ಹೊಳವನಹಳ್ಳಿ ನಂಜುಂಡೇಶ್ವರ ಶಿವಾಚಾರ್ಯ ಸ್ವಾಮಿಗಳು, ಮಾದಿಹಳ್ಳಿ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ಇದೇ ಸಂದರ್ಭದಲ್ಲಿ ರಂಭಾಪುರಿ ಬೆಳಗು ಮಾಸಿಕವನ್ನು ಅ.ಭಾ.ವೀ ಮಹಾಸಭಾದ ನಿರ್ದೇಶಕ ಎನ್. ನಂಜುಂಡೇಶ ಬಿಡುಗಡೆ ಮಾಡಿ ಮಾತನಾಡಿದರು.

ನಂಜುಂಡೇಶ, ಎಸ್.ಪಿ. ಚಿದಾನಂದ, ಕೆ.ಎಸ್. ಸಿದ್ದಲಿಂಗಪ್ಪ, ಬಿ.ಎಸ್. ಮಂಜುನಾಥ, ಕೆ.ಜಿ. ರುದ್ರಪ್ಪ, ಕೆ.ಎಸ್. ಮಂಜುನಾಥ, ಶೈಲಾ ಶಿವಕುಮಾರ, ಡಾ. ದರ್ಶನ್ ಕೆ.ಎಲ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಮೋಹನಕುಮಾರ ಪಟೇಲ, ಟಿ.ಎಸ್. ಸಿದ್ಧಗಂಗಾ ರುದ್ರೇಶ, ಕವಿತಾ, ಕೆ.ಎನ್. ಗಂಗಣ್ಣ, ಹೆಚ್.ಬಿ.ಎಂ ಹಿರೇಮಠ ಇವರೆಲ್ಲರಿಗೂ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ನೇತೃತ್ವ ವಹಿಸಿದ್ದರು. ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟಿನ ಉಪಾಧ್ಯಕ್ಷ ಕೆ.ಎಸ್. ಉಮೇಶ್ ಕುಮಾರ ಸ್ವಾಗತಿಸಿದರು. ಡಿ.ಆರ್. ಸತೀಶ ನಿರೂಪಿಸಿದರು.

## ಕಲೆಗಳ ಪ್ರದರ್ಶನಕ್ಕೆ ಪ್ರತಿಭಾ ಕಾರಂಜಿ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿನ ಕಲಾ ಪ್ರತಿಭೆಗಳನ್ನು ಹೊರಹಾಕಲು ಪ್ರತಿಭಾ ಕಾರಂಜಿ ಸಹಕಾರಿ ಎಂದು ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ ಉಪಾಧ್ಯಕ್ಷ ವಿ.ಎಸ್. ನೀಲಗುಂದ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾ ಭವನದಲ್ಲಿ ಮುಳಗುಂದ ಕ್ಲಸ್ಟರ್ ಮಟ್ಟದ ಪ್ರೌಢಶಾಲಾ ವಿಭಾಗದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳಲ್ಲಿ ಸಾಕಷ್ಟು ಕಲಾ ಪ್ರತಿಭೆಗಳಿದ್ದು, ಅವುಗಳನ್ನು ಹೊರಹಾಕಲು ಪ್ರತಿಭಾ ಕಾರಂಜಿ ಸಹಕಾರಿಯಾಗಿದೆ. ಮಕ್ಕಳು ಶ್ರದ್ಧೆ, ಸತತ ಪ್ರಯತ್ನ, ಸಾಧನೆಯ ಛಲ ಹೊಂದಿದ್ದರೆ ಎಲ್ಲವೂ ಸಾಧ್ಯವಾಗುತ್ತದೆ ಎಂದರು.

ಎ.ಎಂ. ಅಂಗಡಿ ಮಾತನಾಡಿ, ಮಕ್ಕಳಲ್ಲಿ ಸಾಕಷ್ಟು ಪ್ರತಿಭೆಗಳು ಇರುವುದರಿಂದ ಅವುಗಳನ್ನು ಗುರುತಿಸುವ ಜವಾಬ್ದಾರಿ ಪೋಷಕರು ಹಾಗೂ ಶಿಕ್ಷಕರ ಮೇಲಿದೆ. ಅವರಿಗೆ ಸೂಕ್ತ ತರಬೇತಿ ನೀಡಿ ಪ್ರೋತ್ಸಾಹಿಸಿದಲ್ಲಿ ಮಕ್ಕಳ ಪ್ರತಿಭೆ ಅನಾವರಣಗೊಳ್ಳುತ್ತದೆ ಎಂದರು.

ಎಂ.ಎಂ. ನಿಂಬನಾಯ್ಕರ ಮಾತನಾಡಿ, ಮುಳಗುಂದ ಪಟ್ಟಣ ಶೈಕ್ಷಣಿಕವಾಗಿ ಮುಂದುವರೆಯಲು ಇಲ್ಲಿನ ಎಲ್ಲಾ ಗುರು-ಹಿರಿಯರ ಸಹಾಯ ಸಹಕಾರ ಇರುವುದರಿಂದ ನಾನು ಸಿಆರ್‌ಪಿ ಹುದ್ದೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ಸಾಧ್ಯವಾಗಿದೆ ಎಂದರು.


ಅಧ್ಯಕ್ಷತೆಯನ್ನು ಡಾ. ಎಸ್.ಸಿ. ಚವಡಿ ವಹಿಸಿದ್ದರು, ವಿ.ಎಸ್. ನೀಲಗುಂದ, ಪ್ರಾಚಾರ್ಯ ಎ.ಎಂ. ಅಂಗಡಿ, ಇ.ಎಂ. ಗುಳೆದಗುಡ್ಡ, ಸಿಆರ್‌ಪಿ ಆರ್.ಎನ್. ಅಣ್ಣಿಗೇರಿ, ಎಂ.ಎಂ. ಮೇಗಲಮನಿ ಹಾಗೂ ಮುಳಗುಂದ ಕ್ಲಸ್ಟರ್ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಜಾಮಿಯಾ ಮಿಲ್ಲಿಯಾ ।'ಮುಸ್ಲಿಂ ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯ'ದ ಬಗ್ಗೆ ಪ್ರಶ್ನೆ ಕೇಳಿದ ಪ್ರಾಧ್ಯಾಪಕ ಅಮಾನತು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪದವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿದ್ದ "ಭಾರತದಲ್ಲಿ ಮುಸ್ಲಿಂ ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯದ ಬಗ್ಗೆ ವಿವರಿಸಿ" ಎಂಬ ಪ್ರಶ್ನೆಯ ಬಗ್ಗೆ ದೂರುಗಳು ಬಂದ ನಂತರ ದೆಹಲಿಯ ಜಾಮಿಯಾ ಮಿಲ್ಲಿಯಾ ಇಸ್ಲಾಮಿಯಾ ವಿಶ್ವವಿದ್ಯಾಲಯವು ಸಮಾಜ ಕಾರ್ಯ ವಿಭಾಗದ ಪ್ರಾಧ್ಯಾಪಕರನ್ನು ಮಂಗಳವಾರ (ಡಿ.23) ಅಮಾನತುಗೊಳಿಸಿದೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. ಪ್ರಶ್ನೆ ಪತ್ರಿಕೆ ಸಿದ್ಧಪಡಿಸಿದ ಪ್ರಾಧ್ಯಾಪಕ ವೀರೇಂದ್ರ ಬಾಲಾಜಿ ಶಹರೆ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಪೊಲೀಸರನ್ನು ಕೇಳುವುದಾಗಿ ವಿವಿ ತಿಳಿಸಿದೆ ಎಂದು ವರದಿ ಹೇಳಿದೆ. ಭಾನುವಾರ ನಡೆದ ಬ್ಯಾಚುಲರ್ ಆಫ್ ಆರ್ಟ್ಸ್ (ಆನರ್ಸ್) ಶೋಷಿಯಲ್ ವರ್ಕ್ ಕೋರ್ಸ್‌ನ ಮೊದಲ ಸೆಮಿಸ್ಟರ್ ಪರೀಕ್ಷೆಯ 'ಭಾರತದಲ್ಲಿ ಸಾಮಾಜಿಕ ಸಮಸ್ಯೆಗಳು' ವಿಷಯದ ಪ್ರಶ್ನೆ ಪತ್ರಿಕೆಯಲ್ಲಿ, "ಭಾರತದಲ್ಲಿ ಮುಸ್ಲಿಂ ಅಲ್ಪಸಂಖ್ಯಾತರ ವಿರುದ್ಧದ ದೌರ್ಜನ್ಯಗಳನ್ನು ಸೂಕ್ತ ಉದಾಹರಣೆಗಳೊಂದಿಗೆ ವಿವರಿಸಿ" ಎಂಬ ಪ್ರಶ್ನೆ ನೀಡಲಾಗಿತ್ತು.

## ಜನಪದ ಸಾಹಿತ್ಯದಿಂದ ಉತ್ತಮ ಸಂಸ್ಕಾರ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಾನಪದ ಸಾಹಿತ್ಯವು ಹುಟ್ಟಿನಿಂದ ಸಾಯುವವರೆಗೂ ಪ್ರತಿಯೊಬ್ಬರ ಜೀವನದಲ್ಲೂ ಹಾಸು ಹೊಕ್ಕಾಗಿದೆ. ಜನಪದ ಒಳ್ಳೆಯ ಸಂಸ್ಕಾರವನ್ನು ನೀಡುತ್ತಿದೆ ಎಂದು ಸಾಹಿತಿ ಶಿವಯೋಗಿ ವಿಭೂತಿ ಹೇಳಿದರು.

ಅವರು ಕಸಾಪ ವತಿಯಿಂದ ಕಡಕೋಳ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆ ಮತ್ತು ಪದವಿಪೂರ್ವ ಕಾಲೇಜುಗಳ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಾನಪದ ಸಾಹಿತ್ಯವು ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದೆ. ಜನಪದ ಸಾಹಿತ್ಯ ಗ್ರಾಮೀಣ ಜನರ ಭಾವನೆಗಳು, ಸಂಪ್ರದಾಯಗಳು, ನಂಬಿಕೆಗಳು ಮತ್ತು ಜೀವನ ಮೌಲ್ಯಗಳನ್ನು ಪ್ರತಿಬಿಂಬಿಸುವ ಶಕ್ತಿಯುತ ಮಾಧ್ಯಮವಾಗಿದೆ ಎಂದರು. ತಿಪ್ಪಣ್ಣ ಕೊಂಚಿಗೇರಿ, ನವೀನಕುಮಾರ ಅಳವಂಡಿ, ಬಿ.ಎಂ. ಯರಕದ, ಎಸ್.ಬಿ. ಹೊಸೂರ, ಸತೀಶ ದೇಶಪಾಂಡೆ, ಮಲ್ಲಪ್ಪ ಹರ್ತಿ, ಕನಕಮ್ಮ, ಎಸ್.ಬಿ. ಮುಲ್ಕಿಗೌಡರ, ರವಿ ಗೌಡ್ರು, ಈರನಗೌಡ ಪಾಟೀಲ, ಜ್ಯೋತಿ ಕೊಂಚಿಗೇರಿ, ಮಾಂತೇಶ ಮೆಳ್ಳಿಗಟ್ಟಿ, ಶರಣು ಕಲ್ಗುಡಿ ಮುಂತಾದವರು ಉಪಸ್ಥಿತರಿದ್ದರು.

ಕರ್ನಾಟಕ ಒಲಂಪಿಕ್ ಅಸೋಸಿಯೇಶನ್ ಹಾಗೂ ಕರ್ನಾಟಕ ಕುಸ್ತಿ ಸಂಘದ ಸಂಯುಕ್ತ ಆಶ್ರಯದಲ್ಲಿ 2025-26ನೇ ಸಾಲಿನ ಕರ್ನಾಟಕ ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿಗೆ ಕುಸ್ತಿಪಟುಗಳ ಆಯ್ಕೆ ಪ್ರಕ್ರಿಯೆಯನ್ನು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಕುಸ್ತಿ ಸಂಘದ ಅಧ್ಯಕ್ಷ ಹಾಲಪ್ಪ ವರವಿ, ಕರ್ನಾಟಕ ಕುಸ್ತಿ ಸಂಘದ ಸಿ.ಇ.ಓ ನಾಗೇಶ, ತಾಂತ್ರಿಕ ಸಮಿತಿ ಚೇರಮನ್ ಡಾ. ವಿನೋದಕುಮಾರ, ಸಣ್ಣಯಲ್ಲಪ್ಪ ವಳಗೇರಿ, ಚಂದ್ರಶೇಖರ ಗಡಾದ, ದಯಾನಂದ ಹಂಡಿ, ವೆಂಕಟೇಶ ಶಾಂತಗಿರಿ ಉಪಸ್ಥಿತರಿದ್ದರು.



## ಕೇಂದ್ರದ ಜಿ ರಾಮ್ ಜಿ ಕಾಯ್ದೆ ವಿರುದ್ಧ ತಮಿಳುನಾಡಿನಾದ್ಯಂತ ಬೃಹತ್ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರದ ವಿಕಸಿತ್ ಭಾರತ್ ಗ್ಯಾರಂಟಿ ಫಾರ್ ರೋಝ್‌ಗಾರ್ ಅಂಡ್ ಅಜೀವಿಕ ಮಿಷನ್ (ಗ್ರಾಮೀಣ್) ಕಾಯ್ದೆ, 2025 (ವಿಬಿ-ಜಿ ರಾಮ್ ಜಿ) ವಿರುದ್ಧ ತಮಿಳುನಾಡಿನ ಆಡಳಿತರೂಢ ಡಿಎಂಕೆ ಮೈತ್ರಿಕೂಟವು ಬುಧವಾರ (ಡಿ.24) ರಾಜ್ಯದಾದ್ಯಂತ ಬೃಹತ್ ಪ್ರತಿಭಟನೆ ನಡೆಸಿದೆ.

ರಾಜ್ಯದ 389 ಸ್ಥಳಗಳಲ್ಲಿ ದಿನಗೂಲಿ ಕಾರ್ಮಿಕರು ಪ್ರತಿಭಟಿಸಿದ್ದಾರೆ ಎಂದು ಮುಖ್ಯಮಂತ್ರಿ ಎಂ.ಕೆ ಸ್ಟಾಲಿನ್ ಮಾಹಿತಿ ನೀಡಿದ್ದಾರೆ.

## ಶಾಲಾ ವಾರ್ಷಿಕೋತ್ಸವ, ಸಾಂಸ್ಕೃತಿಕ ಸಂಭ್ರಮಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀಮತಿ ಶಾಂತಾ ಎಸ್.ಕಂಪಗೌಡ್ರ ಇಂಟರ್ನ್ಯಾಷನಲ್ ಸಿಬಿಎಸ್‌ಇ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶಾಲಾ ವಾರ್ಷಿಕೋತ್ಸವ, ಸಾಂಸ್ಕೃತಿಕ ಸಂಭ್ರಮಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಕಾರ್ಯದರ್ಶಿ ಆನಂದ ಗುಂಡಗೋವಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಪಿ.ಬೊಮ್ಮನಹಳ್ಳಿ ಆಗಮಿಸಿದ್ದರು.

ವೇದಿಕೆಯ ಮೇಲೆ ಶಾಲೆಯ ಕಾರ್ಯದರ್ಶಿ ಆನಂದ್ ಗುಂಡಗೋವಿ, ನಿರ್ದೇಶಕ ಜಗದೀಶ ನರಗುಂದ, ಪ್ರಾಂಶುಪಾಲ ಶ್ರೀಧರ್ ಕಮತರ ಹಾಗೂ ಮುಖ್ಯೋಪಾಧ್ಯಾಯೆ ಆಸ್ಮಾ ದೊಡ್ಡಮನಿ ಉಪಸ್ಥಿತರಿದ್ದರು.

ಪ್ರಾಂಶುಪಾಲರು ವಾರ್ಷಿಕ ವರದಿಯನ್ನು ನೀಡಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಸಾಧಕ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು.

ವೇದಿಕೆ ಕಾರ್ಯಕ್ರಮವನ್ನು ಶಿಕ್ಷಕರಾದ ವಿಜಯಲಕ್ಷ್ಮಿ ಮತ್ತು ಮೇಘಾ ನಿರೂಪಿಸಿದರು. ಮೀನಾಕ್ಷಿ ಅತಿಥಿಗಳನ್ನು ಪರಿಚಯಿಸಿದರು. ದೀಪಾ, ಫರೀದಾ, ಸುಮಾ ಪ್ರಶಸ್ತಿ ವಿತರಣಾ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಬ್ಲೆಸಿನಾರವರು ವಂದಿಸಿದರು.

## ಕುಡಿಯುವ ನೀರು ಶುದ್ಧವಾಗಿರಲಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರತಿಯೊಬ್ಬರೂ ಶುದ್ಧ ನೀರು ಕುಡಿಯುವುದರಿಂದ ಆರೋಗ್ಯ ವೃದ್ಧಿಯಾಗುವುದು ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ಯೋಜನಾಧಿಕಾರಿ ಕೇಶವ ದೇವಾಂಗ ಹೇಳಿದರು.

ಅವರು ಪಟ್ಟಣದಲ್ಲಿ ಪ.ಪಂ ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಶಿರಹಟ್ಟಿ ಇವರ ಸಹಯೋಗದಲ್ಲಿ 590ನೇ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟಿಸಿ ಮಾತನಾಡಿ, ರೋಗ ರುಜಿನಗಳ ಮೂಲ ನೀರಾಗಿದೆ. ಪ್ರತಿಯೊಬ್ಬರೂ ಶುದ್ಧ ನೀರು ಸೇವನೆಯಿಂದ ಉತ್ತಮ ಆರೋಗ್ಯ ಹೊಂದಲು ಸಹಕಾರಿಯಾಗುತ್ತದೆ. ಗ್ರಾಮೀಣ ಭಾಗದ ಜನರ ಆರೋಗ್ಯದ ಹಿತದೃಷ್ಟಿಯಿಂದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘವು ಶುದ್ಧ ನೀರಿನ ಘಟಕಗಳನ್ನು ನಿರ್ಮಿಸುತ್ತಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಎಸ್.ಸಿ. ಬಡ್ನಿ, ಕೆ.ಎಲ್. ಕರಿಗೌಡರ, ಬಸವರಾಜ ಸುಂಕಾಪೂರ, ವಿಜಯ ನೀಲಗುಂದ, ಬಸವರಾಜ ಹಾರೋಗೇರಿ, ಪ್ರಕಾಶ ಮದ್ದಿನ, ತಾಲೂಕಾ ಯೋಜನಾಧಿಕಾರಿ ಪುನಿತ ಓಲೇಕಾರ, ಗೀತಾ ಜಾಧಾವ, ಅಕ್ಕಮ್ಮಾ ನೀಲಗುಂದ, ಸಂದೀಪ ಬಾಳಿಕಾಯಿ, ಮೇಲ್ವಿಚಾರಕಿ ಶಾಂತಾ ಇದ್ದರು.

## ವ್ಯಕಿತ್ವ ವಿಕಸನಕ್ಕೆ ಎನ್‌ಎಸ್‌ಎಸ್ ಶಿಬಿರ ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ವ್ಯಕ್ತಿತ್ವ ವಿಕಸನಕ್ಕೆ ಎನ್‌ಎಸ್‌ಎಸ್ ಶಿಬಿರಗಳು ಸಹಕಾರಿಯಾಗಿವೆ ಎಂದು ಮುಳಗುಂದ ಕನಕದಾಸ ಕಲಾ ಹಾಗೂ ವಾಣಿಜ್ಯ ವಿಭಾಗದ ಪ್ರಾಚಾರ್ಯ ಎಸ್.ಎಸ್. ಚೌಟಗೇರಿ ಹೇಳಿದರು.

ಅವರು ಯಲಿಶಿರೂರ ಗ್ರಾಮದಲ್ಲಿ 2025/26ನೇ ಸಾಲಿನ ಎನ್‌ಎಸ್‌ಎಸ್ ಶಿಬಿರ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸೇವಾ ಬದ್ಧತೆ ಮೂಡಿಸುವುದಕ್ಕೆ ಎನ್‌ಎಸ್‌ಎಸ್ ಶಿಬಿರಗಳು ಸಹಕಾರಿಯಾಗುತ್ತವೆ. ಇದರಿಂದ ವಿದ್ಯಾರ್ಥಿಗಳ ಕೇವಲ ಪಠ್ಯಕ್ಕೆ ಮಾತ್ರ ಸೀಮಿತವಾಗಿರದೆ, ಸಮಾಜದಲ್ಲಿ ಸೇವಾ ಮನೋಭಾವನೆ, ಸ್ವಚ್ಛತೆಯ ಅರಿವು ಹೊಂದಲು ಸಹಕಾರಿಯಾಗುತ್ತದೆ ಎಂದರು.

ಗ್ರಾ.ಪಂ ಅಧ್ಯಕ್ಷ ಪರಶುರಾಮ ಹೂಗಾರ, ಶರಣಪ್ಪ ಡೋಣಿ, ಸಂತೋಷ ಹುಡೇದ, ಪಿಡಿಓ ಎಸ್.ಕೆ. ವಾಲಿ, ಸಿ.ಎಸ್. ಹಿರೇಮಠ, ಪ್ರಕಾಶ ಭೋರಣಿ, ಯೋಜನಾಧಿಕಾರಿ ಆಶಾ ಹೆಗ್ಗಣ್ಣವರ, ಪ್ರಾಚಾರ್ಯ ಎಸ್.ಎಸ್. ಚೌಟಗೇರಿ ಹಾಗೂ ಶಿಬಿರಾರ್ಥಿಗಳು ಇದ್ದರು.



## ಸಿಎಂ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ಮಧ್ಯಪ್ರವೇಶ ಮಾಡಲ್ಲ: ರಾಜಣ್ಣ

■ ವಿಜಯಸಾಕ್ಷಿ ಸುದ್ದಿ, ತುಮಕೂರು

ರಾಜ್ಯ ಕಾಂಗ್ರೆಸ್‌ನಲ್ಲಿ ತಲೆದೋರಿರುವ ಅಧಿಕಾರ ಹಂಚಿಕೆ ಹಾಗೂ ಸಿಎಂ ಬದಲಾವಣೆ ಕುರಿತ ಗೊಂದಲದಲ್ಲಿ ಹೈಕಮಾಂಡ್ ಮಧ್ಯಪ್ರವೇಶ ಮಾಡುವ ಸಾಧ್ಯತೆ ಇಲ್ಲ ಎಂದು ಮಾಜಿ ಸಚಿವ ಕೆಎನ್ ರಾಜಣ್ಣ ಅಭಿಪ್ರಾಯಪಟ್ಟಿದ್ದಾರೆ.

ತುಮಕೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ಸಿಎಂ ಬದಲಾವಣೆ ಕುರಿತ ಗೊಂದಲವನ್ನು ನಾವು ಸೃಷ್ಟಿ ಮಾಡಿಲ್ಲ. ನೀವು ಸೃಷ್ಟಿ ಮಾಡಿಕೊಂಡ ಗೊಂದಲವನ್ನು ನೀವೇ ಬಗೆಹರಿಸಿಕೊಳ್ಳಿ ಎಂಬ ಸಂದೇಶವನ್ನು ಹೈಕಮಾಂಡ್ ನೀಡಿದೆ. ಇದರ ಅರ್ಥ, ಈ ವಿಚಾರದಲ್ಲಿ ಹೈಕಮಾಂಡ್ ನೇರ ಹಸ್ತಕ್ಷೇಪ ಮಾಡುವುದಿಲ್ಲ ಎಂಬುದೇ ನನ್ನ ಭಾವನೆ" ಎಂದು ಹೇಳಿದರು.

ಈ ವಿಚಾರದಲ್ಲಿ ಹೈಕಮಾಂಡ್ ಮೇಲೆ ಬೆರಳು ಚಾಚುವ ಅಗತ್ಯವಿಲ್ಲ. ಇದು ಇಲ್ಲೇ ಕೆಲವರಿಂದ ಸೃಷ್ಟಿಯಾದ ಗೊಂದಲ. ಜನವರಿ ಅಥವಾ ಫೆಬ್ರವರಿಯಲ್ಲಿ ರಾಜ್ಯದಲ್ಲಿ ಸಂಪುಟ ಪುನಾರಚನೆ ನಡೆಯುವ ಸಾಧ್ಯತೆ ಇದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಗೆ ತೆರಳಿ ಹೈಕಮಾಂಡ್ ಭೇಟಿಯಾದ ನಂತರ ಈ ಪ್ರಕ್ರಿಯೆ ಆರಂಭವಾಗಬಹುದು. ಸದ್ಯ ಹೈಕಮಾಂಡ್ ಬ್ಯುಸಿಯಾಗಿದ್ದು, ಎಲ್ಲ ನಿರ್ಣಯವೂ ಅವರ ತೀರ್ಮಾನದ ಮೇಲೆಯೇ ಅವಲಂಬಿತವಾಗಿದೆ. ಸಿದ್ದರಾಮಯ್ಯ ಅವರಿಗೆ ತೊಂದರೆ ಆಗುತ್ತದೆಯೋ ಅಥವಾ ಆಗುವುದಿಲ್ಲವೋ ಎಂಬುದೂ ಹೈಕಮಾಂಡ್‌ಗೆ ಮಾತ್ರ ಗೊತ್ತು ಎಂದು ಹೇಳಿದರು.

ಈ ನಡುವೆ ಉಪಮುಖ್ಯಮಂತ್ರಿ ಹಾಗೂ ಮುಖ್ಯಮಂತ್ರಿ ಇಬ್ಬರನ್ನೂ ನಾನು ಭೇಟಿಯಾಗಿದ್ದೇನೆ. ರಾಜಕೀಯ ಚರ್ಚೆಯ ಜೊತೆಗೆ ನನ್ನ ಕ್ಷೇತ್ರದ ಅಭಿವೃದ್ಧಿ ಕುರಿತೂ ಮಾತುಕತೆ ನಡೆಸಿದ್ದೇನೆ ಎಂದು ತಿಳಿಸಿದರು.

**ಶಾಲಾ ವಿದ್ಯಾರ್ಥಿಗಳ ಕ್ಷೇತ್ರ ಭೇಟಿ ಪ್ರವಾಸ ಕಾರ್ಯಕ್ರಮಕ್ಕೆ ನಿಶಾನೆ ತೋರಿಸಿದ ಶಾಸಕ ಡಾ. ಚಂದ್ರು ಲಮಾಣಿ**

# ವಿದ್ಯಾರ್ಥಿಗಳಿಗೆ ಪ್ರಪಂಚ ಜ್ಞಾನ ಮುಖ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಾಲೆಯಲ್ಲಿ ಕಲಿತ ವಿದ್ಯೆಯ ಜೊತೆಗೆ ಹೊರಗಿನ ಪ್ರಪಂಚದ ಜ್ಞಾನ, ಹೊಸ ಸಂಸ್ಕೃತಿ, ಅನುಭವ ತಿಳಿಸಿಕೊಡುವ ಉದ್ದೇಶದಿಂದ ಸರಕಾರವು ಕ್ಷೇತ್ರ ಭೇಟಿಯಂತಹ ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದು, ಮಕ್ಕಳು ಇಂತಹ ಯೋಜನೆಯ ಪ್ರಯೋಜನ ಪಡೆದು ಹೆಚ್ಚಿನ ಜ್ಞಾನ ಸಂಪಾದಿಸಿಕೊಳ್ಳಬಹುದಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.




ಅವರು ಪಟ್ಟಣದ ಪಿ.ಎಂ.ಶ್ರೀ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.4ರ ಆವರಣದಲ್ಲಿ ಪಿ.ಎಮ್.ಶ್ರೀ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ಅಡರಕಟ್ಟಿ ಹಾಗೂ ಪಿ.ಎಂ.ಶ್ರೀ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.4 ಲಕ್ಷ್ಮೇಶ್ವರ ಶಾಲೆಗಳ ಎಲ್ಲ ವಿದ್ಯಾರ್ಥಿಗಳಿಗಾಗಿ ಒಟ್ಟು 7 ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಬುಧವಾರ ಪಿ.ಎಂ.ಶ್ರೀ ಶಾಲೆಗಳ ವಿದ್ಯಾರ್ಥಿಗಳಿಗಾಗಿ ಕ್ಷೇತ್ರ ಭೇಟಿ ಒಂದು ದಿನದ ಪ್ರವಾಸ ಕಾರ್ಯಕ್ರಮದ ವಾಹನಗಳಿಗೆ ಹಸಿರು ನಿಶಾನೆ ತೋರಿ ಚಾಲನೆ ನೀಡಿ ಮಾತನಾಡಿದರು.

ತರಗತಿಯ ಜ್ಞಾನವನ್ನು ನೈಜ ಪ್ರಪಂಚದ ಜೊತೆ ಬೆಸೆಯುವುದೇ ಕ್ಷೇತ್ರ ಭೇಟಿಯ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಸರಕಾರದ ಮಹತ್ವದ ಯೋಜನೆಯಡಿ ಪಿ.ಎಂ.ಶ್ರೀ ಶಾಲೆಗಳ ಮಕ್ಕಳಿಗೆ ಕ್ಷೇತ್ರ ಭೇಟಿ ಕಾರ್ಯಕ್ರಮವನ್ನು ಸಂಘಟಿಸಲಾಗುತ್ತಿದೆ. ರಸ್ತೆಗಳು ಸರಿಯಾಗಿಲ್ಲವಾದ ಕಾರಣ ವಾಹನ ಚಾಲಕರು ಎಚ್ಚರಿಕೆಯಿಂದ ವಾಹನ ಚಲಾಯಿಸಿ ಮಕ್ಕಳನ್ನು ಸುರಕ್ಷತೆಯಿಂದ ಕರೆದುಕೊಂಡು ಹೋಗಿ ಬರುವಂತೆ ಸಲಹೆ ನೀಡಿದರು.

ಪುರಸಭೆ ಮಾಜಿ ಸದಸ್ಯರಾದ ಬಸವರಾಜ ಓದುನವರ, ಪ್ರವೀಣ ಬಾಳಿಕಾಯಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ, ಕಾರ್ಯದರ್ಶಿ ಚಂದ್ರು ನೇಕಾರ, ಡಿ.ಡಿ. ಲಮಾಣಿ, ಎಲ್.ಎನ್. ನಂದೆಣ್ಣವರ, ಬಸವರಾಜ ಯತ್ತಿನಹಳ್ಳಿ, ರಾಜ್ಯ ಸರಕಾರಿ ನೌಕರರ ಸಂಘದ ಕಾರ್ಯದರ್ಶಿ ಎಂ.ಎ. ನದಾಫ್, ಮುಖ್ಯೋಪಾಧ್ಯಾಯರುಗಳಾದ ಬಿ.ಎಂ. ಕುಂಬಾರ, ಎಚ್.ಬಿ. ಸಣ್ಣಮನಿ, ಎಸ್.ಎಚ್. ಉಮಚಗಿ, ಅಡರಕಟ್ಟಿ ಗ್ರಾಮ ಪಂಚಾಯಿತಿ ಸದಸ್ಯೆ ಕಮಲವ್ವ ಲಮಾಣಿ, ಎಸ್.ಡಿ.ಎಂ.ಸಿ ಅಧ್ಯಕ್ಷರುಗಳಾದ ಶಿವಾನಂದ ಚಕ್ರಸಾಲಿ, ಮಲ್ಲೇಶಪ್ಪ ಅಡರಕಟ್ಟಿ, ಎಸ್.ಡಿ.ಎಂ.ಸಿ ಉಪಾಧ್ಯಕ್ಷರು, ಸದಸ್ಯರು, ವಿವಿಧ ಶಾಲೆಗಳ ಶಿಕ್ಷಕರು, ಮುಖಂಡರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪ್ರೌಢಶಾಲಾ ವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ ಸ್ವಾಗತಿಸಿ ನಿರೂಪಿಸಿದರು. ಸಿಆರ್‌ಪಿಗಳಾದ ಉಮೇಶ ನೇಕಾರ ಹಾಗೂ ಶ್ರೀನಿವಾಸ ಮತ್ತೂರ ನಿರ್ವಹಿಸಿ ವಂದಿಸಿದರು.

> ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೋಶ ಓದು-ದೇಶ ಸುತ್ತು ಎಂಬ ಮಾತಿನಂತೆ ಪ್ರವಾಸ ಕೇವಲ ಮನರಂಜನೆಯಲ್ಲ. ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯಲ್ಲಿ ಕೊಠಡಿಯ ಹೊರಗಿನ ಕಲಿಕೆಯು ಬಹು ಮುಖ್ಯ ಪಾತ್ರವಹಿಸುತ್ತದೆ. ಧಾರವಾಡದ ಕೃಷಿ ವಿಶ್ವವಿದ್ಯಾಲಯ, ಕರ್ನಾಟಕ ವಿಶ್ವವಿದ್ಯಾಲಯ, ವಿಜ್ಞಾನ ಕೇಂದ್ರ, ಕರ್ನಾಟಕ ಹಾಲು ಒಕ್ಕೂಟ ಮುಂತಾದ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯುವ ಯೋಜನೆ ಹಮ್ಮಿಕೊಳ್ಳಲಾಗಿದೆ. ಇದು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಮೂಡಿಸುತ್ತದೆ ಎಂದರು.

## ಕೆಜಿಎಂಪಿಎಸ್ ಶಾಲೆಯಲ್ಲಿ ಗಣಿತ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕೆಜಿಎಂಪಿಎಸ್ ಶಾಲೆಯಲ್ಲಿ ಗಣಿತ ದಿನಾಚರಣೆಯನ್ನು ಆಚರಿಸಲಾಯಿತು. ದಿನಾಚರಣೆಯ ನಿಮಿತ್ತ ಮಕ್ಕಳಿಗೆ ಗಣಿತದಲ್ಲಿ ರಸಪ್ರಶ್ನೆ ಕಾರ್ಯಕ್ರಮವನ್ನು ಏರ್ಪಡಿಸಿ ಅವರಲ್ಲಿ ಗಣಿತದ ಬಗ್ಗೆ ಕುತೂಹಲವನ್ನು ಮೂಡಿಸಲಾಯಿತು. 8 ಮಕ್ಕಳ ಒಂದೊಂದು ಗುಂಪನ್ನು ಮಾಡಿ ಪ್ರತಿ ಗುಂಪಿಗೂ ಪ್ರಶ್ನೆಗಳನ್ನು ಕೇಳಲಾಯಿತು. ವಿದ್ಯಾರ್ಥಿಗಳಿಗೆ ಗಣಿತದ ರೇಖಾಕೃತಿಗಳ ಮೂಲಕ ರಂಗೋಲಿ ಬಿಡಿಸುವ ಸ್ಪರ್ಧೆಯನ್ನೂ ಏರ್ಪಡಿಸಲಾಗಿತ್ತು.

ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಮುಖ್ಯ ಶಿಕ್ಷಕ ಬಿ.ಬಿ. ಕುರಿ ಮಾತನಾಡಿ, ಗಣಿತವೆಂದಿಗೂ ಕಬ್ಬಿಣದ ಕಡಲೆಯಲ್ಲ. ಅದನ್ನು ಆಡುತ್ತ ಆಡುತ್ತ ಕಲಿಯಬಹುದು. ಗಣಿತ ಮೂಲ ಕ್ರಿಯೆಗಳಾದ ಸಂಕಲನ, ವ್ಯವಕಲನ, ಗುಣಾಕಾರ, ಭಾಗಾಕಾರಗಳನ್ನು ಸರಿಯಾಗಿ ತಿಳಿದಿರಬೇಕು. ಮಗ್ಗಿಗಳನ್ನು ಚೆನ್ನಾಗಿ ಬಾಯಿಪಾಠ ಮಾಡಿಕೊಂಡಿರಬೇಕು. ಇದಿಷ್ಟು ಮೂಲ ತಯಾರಿಯನ್ನು ಮಾಡಿಕೊಂಡಿದ್ದರೆ ಗಣಿತವೆಂದಿಗೂ ಕಬ್ಬಿಣದ ಕಡಲೆಯಾಗುವುದಿಲ್ಲ ಎಂದರು.

ಶಿಕ್ಷಕಿ ಎಂ.ಪಿ. ಅಣಗೌಡ್ರ ಮಾತನಾಡಿ, ರೇಖಾಗಣಿತದ ಹಲವಾರು ಚಿತ್ರಗಳನ್ನು ರಂಗೋಲಿ ರೂಪದಲ್ಲಿ ಬಿಡಿಸಲು ಸುಲಭವಿವೆ. ಅವುಗಳನ್ನು ಮನೆಯಲ್ಲಿ ಆಗಾಗ್ಗೆ ರೂಢಿ ಮಾಡಿಕೊಂಡರೆ ನಿಮಗೆ ಪರೀಕ್ಷೆಯಲ್ಲಿ ಅನುಕೂಲವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಶಾಲಾ ಸಿಬ್ಬಂದಿಯವರು ಉಪಸ್ಥಿತರಿದ್ದರು.

**ಚಿಕೇನಕೊಪ್ಪ ಚನ್ನವೀರಶರಣರ 31ನೇ ಪುಣ್ಯಸ್ಮರಣೋತ್ಸವ**

# ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಚಿಕೇನಕೊಪ್ಪ ಚನ್ನವೀರಶರಣರ 31ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಪೂರ್ವಭಾವಿ ಸಭೆ ಹಾಗೂ ದಿನದರ್ಶಿಕೆ ಬಿಡುಗಡೆ ಸಮಾರಂಭವು ನಗರದ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದಲ್ಲಿ ಜರುಗಿತು.




ಸನ್ನಿಧಾನ ವಹಿಸಿದ ಪೂಜ್ಯ ಶ್ರೀ ಶಿವಶಾಂತವೀರ ಶರಣರು ಆಶೀರ್ವಚನ ನೀಡಿ, ಮಠಗಳು, ಜಾತ್ರೆ, ಪುಣ್ಯಸ್ಮರಣೆ ಮೊದಲಾದ ರಚನಾತ್ಮಕ ಕಾರ್ಯಕ್ರಮಗಳ ಮೂಲಕ ಸಮಾಜಮುಖಿಯಾಗಿ ಕಾರ್ಯ ಮಾಡಿ ಜನಕಲ್ಯಾಣ ಮಾಡುವುದರ ಜೊತೆಗೆ ನಿರಂತರವಾಗಿ ಜ್ಞಾನದಾಸೋಹ, ಅನ್ನದಾಸೋಹ, ಸಾಮೂಹಿಕ ವಿವಾಹ ಮೊದಲಾದ ಚಟುವಟಿಕೆಗಳು ಸುಗಮವಾಗಿ ನಿರ್ವಹಣೆಯಾಗಲು ಪೂಜ್ಯ ಚನ್ನವೀರ ಶರಣರ ಆಶೀರ್ವಾದ ಹಾಗೂ ಭಕ್ತರ ನಿಷ್ಕಲ್ಮಷ ಭಕ್ತಿ, ವಿಶ್ವಾಸ, ಪ್ರೀತಿ ಸಮರ್ಪಣಾ ಭಾವದ ಸೇವೆ ಮುಖ್ಯವಾಗಿದೆ. ಈ ಪವಿತ್ರ ಕಾರ್ಯದಲ್ಲಿ ಸರ್ವರೂ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಜಿ.ಪಂ ಮಾಜಿ ಅಧ್ಯಕ್ಷ ಪಿ.ವಾಯ್. ಹುಣಸಿಕಟ್ಟಿ, ಜಿ.ಆರ್. ಓದುಗೌಡರ, ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ರಾಜು ಗುಡಿಮನಿ, ಎಸ್.ಎಫ್. ಗದ್ದಿಕೇರಿ, ವ್ಹಿ.ಬಿ. ಪೊಲೀಸ್‌ಪಾಟೀಲ, ರಾಜೇಂದ್ರಗೌಡ ಕಾಶಿಗೌಡ್ರ, ಡಾ. ಶರಣಬಸವ ವೆಂಕಟಾಪುರ ಮುಂದಿನ ತಿಂಗಳು ಜರುಗುವ ಶ್ರೀ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವ ಯಶಸ್ವಿಗೊಳಿಸಲು ತಮ್ಮ ಅನಿಸಿಕೆಗಳನ್ನು ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಶ್ರೀಮಠದಿಂದ ಪ್ರಕಟವಾದ 2026ರ ದಿನದರ್ಶಿಕೆ ಲೋಕಾರ್ಪಣೆಗೊಳಿಸಲಾಯಿತು.

ತಾ.ಪಂ ಮಾಜಿ ಅಧ್ಯಕ್ಷ ವಿ.ಎಸ್. ಹಿರೇಮಠ, ಎಂ.ಬಿ. ಸಿಕ್ಕೆದೇಸಾಯಿ, ಪುಂಡಲೀಕಪ್ಪ ಕಂಬಿ, ವಸಂತ ಮೇಟಿ, ಕೆ.ಪಿ. ಪಾಟೀಲ, ಎಸ್.ಪಿ. ಪಾಟೀಲ, ಎಸ್.ಎಸ್. ಪಾಟೀಲ (ಅರಹುಣಸಿ), ಅಶೋಕ ಸಂಕಣ್ಣವರ, ಮಹಾದೇವಪ್ಪ ಗೌರಿಪುರ, ಬಸವರಾಜ ಉಮಚಗಿ, ಶಶಿಧರ ಗೂಳರಡ್ಡಿ, ಪ್ರವೀಣಗೌಡ ಪಾಟೀಲ, ಪಂಚಾಕ್ಷರಯ್ಯ ಹಿರೇಮಠ ವ್ಹಿ.ಸಿ. ಬಳ್ಳೊಳ್ಳಿ, ಈರಣ್ಣ ಕುರಡಗಿ, ಕೊಟ್ರೇಶ ವಡಕಣ್ಣವರ ಮೊದಲಾದವರು ಉಪಸ್ಥಿತರಿದ್ದರು.

ಹುಬ್ಬಳ್ಳಿ ನವನಗರದ ಚಿ.ಚ. ಶರಣರ ಅಂಧರ ಕಲ್ಯಾಣಾಶ್ರಮದ ಶಿಕ್ಷಕ ವೇ.ಮೂ. ಶಂಕರಯ್ಯ ಗುರುಮಠ ಪ್ರಾರ್ಥಿಸಿದರು. ಎಸ್.ಎಸ್. ಪುರಾಣಿಕಮಠ ಸ್ವಾಗತಿಸಿದರು. ಪ್ರಾಚಾರ್ಯ ಪ್ರಕಾಶ ಬರದೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ವಾಯ್. ಡೊಳ್ಳಿನ ನಿರೂಪಿಸಿದರು. ಮಾರುತಿ

## ದ್ವೇಷ ಭಾಷಣಕ್ಕೆ ನೀಡಿರುವ ವ್ಯಾಖ್ಯಾನವೇ ಅಸ್ಪಷ್ಟ

▶▶ ಮೊದಲನೇ ಪುಟದಿಂದ

ಈ ಸಂದರ್ಭದಲ್ಲಿ ಪ್ರಮುಖರಾದ ಬಿ.ಎಸ್. ಚಿಂಚಲಿ, ಸಿದ್ದು ಪಲ್ಲೇದ, ವಿಜಯಕುಮಾರ ಗಡ್ಡಿ, ಅನಿಲ ಅಬ್ಬಿಗೇರಿ, ಅಶೋಕ ಕುಡತಿನಿ, ದಶರಥರಾಜ ಕೊಳ್ಳಿ, ಚಂದ್ರು ತಡಸದ, ಶಿವು ಹಿರೇಮನಿಪಾಟೀಲ, ಅಮರನಾಥ ಗಡಗಿ, ಸುರೇಶ ಮರಳಪ್ಪನವರ, ಸುರೇಶ ಚಿತ್ತರಗಿ, ಶಂಕರ ಕಾಕಿ, ಮಾಂತೇಶ ನಲವಡಿ, ಸುಭಾಸ ಸುಂಕದ, ಮಂಜುನಾಥ ಹಳ್ಳೂರಮಠ, ಸಂತೋಷ ಅಕ್ಕಿ, ವಿಜಯಲಕ್ಷ್ಮೀ ಮಾನ್ವಿ, ಮಹಾದೇವಪ್ಪ ಚಿಂಚಲಿ, ವಾಯ್.ಪಿ. ಅಡ್ನೂರ, ಬಸವರಾಜ ಬಡಿಗೇರ, ಮಾಂತೇಶ ಬಾತಾಖಾನಿ, ವಿಶ್ವನಾಥ ಹಳ್ಳಿಕೇರಿ, ಮುತ್ತಣ್ಣ ಮೂಲಿಮನಿ, ಮಹೇಶ ಕಮ್ಮಾರ, ರಮೇಶ ಸಜ್ಜಗಾರ, ಶಂಕರ ಕಾಕಿ, ಶಂಕರ ಕರಿಬಿಷ್ಠಿ, ವಾಯ್.ಪಿ. ಅಡ್ನೂರ, ಮಹೇಶ ಶಿರಹಟ್ಟಿ, ರಾಚಯ್ಯ ಹೊಸಮಠ, ಅಪ್ಪಣ್ಣ ಟೆಂಗಿನಕಾಯಿ, ನಾಗರಾಜ ಮದ್ನೂರ, ಕವಿತಾ ಬಂಗಾರಿ, ಸುಮಂಗಲಾ ತಕ್ಕಲಕೋಟಿ, ಲಲಿತಾ ಉಮಚಗಿ, ಬಸವರಾಜ ನರೆಗಲ್, ವಿನಾಯಕ ಹೊರಕೇರಿ, ವೀರೇಶ ಗದಗಿನ, ನವೀನ ಕುರ್ತಕೋಟಿಮಠ, ಭಗನ ರಾಜಪುರೋಹಿತ್, ಸುರೇಶ ಚವ್ಹಾಣ, ಮೋಹನ ಕೋರಿ, ಸಂಜೀವ ಖಟವಟೆ, ವಸಂತ ಹಬೀಬ, ಬಸಯ್ಯ ಸಾಸ್ವಿಹಳ್ಳಿಮಠ, ಲಕ್ಷ್ಮಣ ರಣ-ತೂರ, ಡಿ.ಬಿ. ಕರೀಗೌಡ್ರ, ಅಪ್ಪು ನಮಸ್ತೆಮಠ, ವಿನೋದ ಹಂಸನೂರ ಮುಂತಾದವರಿದ್ದರು.

## ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪಿಯುಸಿ ಮತ್ತು ಸಾಮಾನ್ಯ ಪದವಿ ಕೋರ್ಸ್‌ಗಳನ್ನು ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ , 2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು 31-1-2026 ರವರೆಗೆ ಪೋಷಕರು/ ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ https://ssp.postmatric.karnataka.gov.in ಆಗಿರುತ್ತದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕಾಗಿ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ : https://bcwd/karnataka.gov.in ಸಂಪರ್ಕಿಸಬಹುದಾಗಿದೆ.

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಮೇರೆಗೆ ಜಿಲ್ಲೆಯ ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿನ ಸಾರ್ವಜನಿಕ ಸಂಚಾರದ ವಲಯಗಳಲ್ಲಿನ, ಸರ್ಕಾರಿ ಮತ್ತು ಅರೆಸರ್ಕಾರಿ ಸಂಸ್ಥೆಗಳಲ್ಲಿರುವ ಬೀದಿ ನಾಯಿಗಳಿಗೆ ಚುಚ್ಚುಮದ್ದು ಹಾಕಿಸಿ ಮತ್ತು ಸಂತಾನ ಹರಣ ಶಸ್ತ್ರ ಚಿಕಿತ್ಸೆ ಕಾರ್ಯಕ್ರಮವನ್ನು ನಿರ್ವಹಿಸಲಾಗುತ್ತಿದೆ. ಶಸ್ತ್ರ ಚಿಕಿತ್ಸೆ ಮಾಡಿದ ನಂತರ ಬೀದಿ ನಾಯಿಗಳನ್ನು ಆಶ್ರಯ ತಾಣದಲ್ಲಿ ಪೋಷಣೆ ಮಾಡಲು ಆಸಕ್ತಿಯುಳ್ಳವರು ಸ್ವ- ಇಚ್ಛೆಯಿರುವ ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ಉಚಿತವಾಗಿ ಸೇವೆಯನ್ನು ಸಲ್ಲಿಸಲು ಇಚ್ಛೆಯುಳ್ಳವರು ಪುರಸಭೆಗೆ ಡಿಸೆಂಬರ್ 31 ರೊಳಗಾಗಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಮುಂಡರಗಿ ಪುರಸಭೆಯ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳನ್ನು ದತ್ತು ತೆ-ಗೆದುಗೊಂಡು ಪೋಷಣೆ ಮಾಡುವ ಇಚ್ಛೆಯುಳ್ಳವರು ಪುರಸಭೆಯಿಂದ ಅನುಮತಿ ಪಡೆದುಕೊಂಡು ದತ್ತು ತೆಗೆದುಕೊಳ್ಳಬಹುದಾಗಿದೆ ಎಂದು ಮುಂಡರಗಿ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಕೋಗನೂರ ಕ್ಲಸ್ಟರ್ ಪ್ರತಿಭಾ ಕಾರಂಜಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಗೋವನಕೊಪ್ಪ ಶಾಲೆಯಲ್ಲಿ ಕೋಗನೂರ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಕಾರ್ಯಕ್ರಮಕ್ಕೆ ಪ್ರೀತಮ್ ಕಬ್ಬೇರಳ್ಳಿ ಡೊಳ್ಳು ಬಾರಿಸುವುದರ ಮೂಲಕ ಚಾಲನೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಂಸಿ ಅಧ್ಯಕ್ಷ ಸುರೇಶ ತಳ್ಳಳ್ಳಿ ಮಾತನಾಡಿ, ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಅನಾವರಣಗೊಳಿಸುವುದೇ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಕೋಗನೂರ ಸಿಆರ್‌ಪಿ ಸತೀಶ ಪಶುಪತಿಹಾಳ, ಶಿರಹಟ್ಟಿ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಬಸವರಾಜ ಯರಗುಪ್ಪಿ, ಅತಿಥಿಗಳಾದ ಭೀಮಣ್ಣ ಕಬ್ಬೇರಳ್ಳಿ, ಜಗದೀಶ ತಳ್ಳಳ್ಳಿ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಕೋಗನೂರ ಗ್ರಾ.ಪಂ ಉಪಾಧ್ಯಕ್ಷೆ ಕಸ್ತೂರೆವ್ವ ತಳ್ಳಳ್ಳಿ, ಸದಸ್ಯರಾದ ಅಜ್ಜಪ್ಪ ಭಜಂತ್ರಿ, ಶಿಕ್ಷಣಪ್ರೇಮಿ ಬಸವರಾಜ ಇಮಡಿ, ಸಿಆರ್‌ಪಿಗಳಾದ ತಿರಕಪ್ಪ ಪೂಜಾರ, ಆರ್ ಮಾಂತೇಶ ಬನ್ನಿಕೊಪ್ಪ, ಸಿ.ವ್ಹಿ. ವಡಕಣ್ಣವರ ಹಿರಿಯ ಶಿಕ್ಷಕರಾದ ಎಮ್.ಬಿ. ಹಾವೇರಿ, ಎಸ್.ಎಫ್. ಮಠದ, ಎನ್.ಕೆ. ಕಲಾಲ, ಜೆ.ಎಸ್. ಯರಗುದ್ರಿ, ಆರ್.ಎಂ. ಕಮ್ಮಾರ, ಆರ್.ಟಿ. ಶಿವಪ್ಪಯ್ಯನಮಠ, ಬಸವರಾಜ ಮಾನೇಗಾರ, ಎಸ್.ಬಿ. ಹೀರೆಮಠ, ಹಾಲೇಶ ಜಕ್ಕಲಿ, ವಿ.ಎಂ. ಮಲ್ಲಪ್ಪನವರ ಮುಂತಾದವರಿದ್ದರು. ಶಾಲೆಯ ಪ್ರಧಾನ ಗುರುಗಳಾದ ಸಿ.ಟಿ. ಹುರಕಣ್ಣವರ ಸ್ವಾಗತಿಸಿದರು. ಡಿ.ಎಂ. ದ್ಯಾಮಣ್ಣವರ ನಿರೂಪಿಸಿದರು. ಎಸ್.ಎನ್. ಮೇಟಿ ವಂದಿಸಿದರು.

**ಶ್ರೀ ಅನ್ನದಾನೇಶ್ವರರ 175ನೇ ಜಾತ್ರಾಮಹೋತ್ಸವದಲ್ಲಿ 'ಬೆತ್ತದ ಅಜ್ಜ' ಚಲನಚಿತ್ರದ ಚಿತ್ರೀಕರಣಕ್ಕೆ ಚಾಲನೆ**

# ಬೆತ್ತದ ಅಜ್ಜನವರು ಶೈಕ್ಷಣಿಕ ಕ್ರಾಂತಿಯ ಮಹಾಪುರುಷರು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತಾವು ಕಲಿಯದಿದ್ದರೂ ಗ್ರಾಮೀಣ ಭಾಗದ ಮಕ್ಕಳು ಚೆನ್ನಾಗಿ ಓದಿ, ಬರೆದು ಉತ್ತಮ ಭವಿಷ್ಯವನ್ನು ಹೊಂದಲಿ ಎಂಬ ಮಹದುದ್ದೇಶದಿಂದ ಸಮೀಪದ ನರೇಗಲ್ಲದ ಕೋಡಿಕೊಪ್ಪದ ವಿಶಾಲ ಜಾಗೆಯಲ್ಲಿ ಶೈಕ್ಷಣಿಕ ಸಂಸ್ಥೆಯನ್ನು ತೆರೆಯುವ ಮೂಲಕ ಬೆತ್ತದ ಅಜ್ಜನವರು ಶೈಕ್ಷಣಿಕ ಕ್ರಾಂತಿಗೈದ ಮಹಾಪುರುಷರಾದರು. ಈ ಸಂಸ್ಥೆಯಲ್ಲಿ ಕಲಿತ ಅದೆಷ್ಟೋ ವಿದ್ಯಾರ್ಥಿಗಳು ತಮ್ಮ ಜೀವನವನ್ನು ಬೆಳಗಿಸಿಕೊಂಡರು. ಅಂತಹ ಮಹನೀಯರ ಚಲನಚಿತ್ರಕ್ಕೆ ಇಂದು ಮುಹೂರ್ತ ಕೂಡಿ ಬಂದಿರುವದು ನಮಗೆ ಅತ್ಯಂತ ಸಂತಸವನ್ನುಂಟು ಮಾಡಿದೆ. ಈ ಚಿತ್ರ ಶೀಘ್ರವೇ ಚಿತ್ರೀಕರಣ ಪೂರೈಸಿ ನಮ್ಮ ಕಣ್ಣ ಮುಂದೆ ಪ್ರದರ್ಶನಗೊಳ್ಳಲಿ ಎಂದು ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.




ಸಮೀಪದ ಹಾಲಕೆರೆ ಗ್ರಾಮದಲ್ಲಿ ಜರುಗುತ್ತಿರುವ ಶ್ರೀ ಅನ್ನದಾನೇಶ್ವರರ 175ನೇ ಜಾತ್ರಾಮಹೋತ್ಸವದಲ್ಲಿ 'ಬೆತ್ತದ ಅಜ್ಜ' ಚಲನಚಿತ್ರದ ಚಿತ್ರೀಕರಣಕ್ಕೆ ಕ್ಲಾಪ್ ಮಾಡಿ ಅವರು ಆಶೀರ್ವಚನ ನೀಡಿದರು.

ಬೆತ್ತದ ಅಜ್ಜನವರು ಕಟ್ಟಿರುವ ಕಟ್ಟಡಗಳನ್ನು ನೀವೊಮ್ಮೆ ನೋಡಬೇಕು. ಯಾವ ಇಂಜಿನಿಯರರೂ ತಲೆಬಾಗುವಂತೆ ನಿಖರವಾದ ಅಳತೆ ಹಾಕಿ ಕಟ್ಟಡ ನಿರ್ಮಿಸಿರುವುದು ಅವರ ಜ್ಞಾನ ಕ್ಷಿತಿಜದ ಪರಿಚಯ ಮಾಡಿಕೊಡುತ್ತದೆ. ಶ್ರೀ ಅನ್ನದಾನ ವಿಜಯ ಬಾಲಕರ ಪ್ರೌಢಶಾಲಾ ಕಟ್ಟಡ, ವಸತಿ ನಿಲಯ ಮತ್ತು ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದ ಕಟ್ಟಡಗಳನ್ನು ನೋಡಿದರೆ ಅಜ್ಜನವರ ಅಗಾಧ ಜ್ಞಾನಕ್ಕೆ ನಾವೆಲ್ಲರೂ ತಲೆದೂಗಲೇಬೇಕಾಗುತ್ತದೆ. ಅವರ ಕೈಯಲ್ಲಿನ ಬೆತ್ತವೇ ಅವರ ಅಳತೆ ಪಟ್ಟಿಯಾಗಿತ್ತು. ಅದರಿಂದ ಗುರುತು ಮಾಡಿದರೆ ಇದು ಇಷ್ಟೇ ಅಳತೆ, ಇಷ್ಟೇ ಉದ್ದ-ಅಗಲವಿದೆ ಎಂಬುದನ್ನು ನಿಖರವಾಗಿ ಹೇಳುತ್ತಿದ್ದರು ಎಂಬುದನ್ನು ಕೇಳಿದಾಗ ಅವರು ಅದೆಂತಹ ಮೇಧಾವಿಯಾಗಿದ್ದರು ಎಂಬುದು ತಿಳಿದು ಬರುತ್ತದೆ ಎಂದರು.

ಈವೇಳೆ ನಾಡಿನ ಹರ-ಗುರು-ಚರ ಮೂರ್ತಿಗಳು, ಶ್ರೀಮಠದ ಗಣ್ಯರು, ತಂತ್ರಜ್ಞರು, ವಿವಿಧ ಅಂಗ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದು ಶುಭ ಹಾರೈಸಿದರು.

> ಇಂತಹ ಮಹಾಮಹಿಮನ ಚಿತ್ರವನ್ನು ನೋಡಲು ನಾವು ತುದಿಗಾಲಲ್ಲಿ ನಿಂತಿದ್ದೇವೆ. ಅವರ ಆಶೀರ್ವಾದದ ಬಲದಿಂದ ಈ ಚಿತ್ರವು ಚೆನ್ನಾಗಿ ಮೂಡಿ ಬರುತ್ತದೆ ಎನ್ನುವ ವಿಶ್ವಾಸ ನಮ್ಮದು. ಈ ಚಿತ್ರದಲ್ಲಿ ಅಭಿನಯಿಸುವ ಎಲ್ಲ ಕಲಾವಿದರಿಗೆ, ತಂತ್ರಜ್ಞರಿಗೆ ಶ್ರೀ ಮಠದಿಂದ, ನಮ್ಮ ಸಂಸ್ಥೆಯ ಎಲ್ಲ ಪದಾಧಿಕಾರಿಗಳು, ಶಿಕ್ಷಕ ಬಳಗ ಮತ್ತು ವಿದ್ಯಾರ್ಥಿ ಬಳಗದಿಂದ ಹಾರ್ದಿಕ ಶುಭಾಶಯಗಳನ್ನು ಕೋರುತ್ತೇವೆ ಎಂದು ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

## ಢಾಕಾದಲ್ಲಿ ಮತ್ತೆ ಹಿಂಸಾಚಾರ: ಕಚ್ಚಾ ಬಾಂಬ್ ದಾಳಿಗೆ ಓರ್ವ ಬಲಿ!



■ವಿಜಯಸಾಕ್ಷಿ ಸುದ್ದಿ, ಢಾಕಾ

ಬಾಂಗ್ಲಾದೇಶದಲ್ಲಿ ಬಿಕ್ಕಟ್ಟು ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದ್ದು, ರಾಜಧಾನಿ ಢಾಕಾದಲ್ಲಿ ಕಚ್ಚಾ ಬಾಂಬ್ ಸ್ಫೋಟ ಸಂಭವಿಸಿ ಓರ್ವ ವ್ಯಕ್ತಿ ಮೃತಪಟ್ಟಿರುವ ಘಟನೆ ನಡೆದಿದೆ.

ಬುಧವಾರ ಸಂಜೆ ಮೊಗ್ಬಜಾರ್ ಪ್ರದೇಶದ ಸ್ವಾತಂತ್ರ್ಯ ಹೋರಾಟಗಾರರ ಸ್ಮಾರಕದ ಮುಂಭಾಗದ ಫ್ಲೈಓವರ್ ಬಳಿ ಈ ದುರ್ಘಟನೆ ಸಂಭವಿಸಿದೆ. ಫ್ಲೈಓವರ್ ಮೇಲಿನಿಂದ ಅಪರಿಚಿತ ದಾಳಿಕೋರರು ಕಚ್ಚಾ ಸ್ಫೋಟಕ ಸಾಧನವನ್ನು ಕೆಳಗೆ ಎಸೆದಿದ್ದಾರೆ. ನೆಲಕ್ಕೆ ಬಿದ್ದ ತಕ್ಷಣ ಸ್ಫೋಟ ಸಂಭವಿಸಿದ್ದು, ಸ್ಥಳದಲ್ಲಿದ್ದ ಸಿಯಾಮ್ ಎಂಬ ವ್ಯಕ್ತಿ ಗಂಭೀರವಾಗಿ ಗಾಯಗೊಂಡು ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತ ಸಿಯಾಮ್ ಖಾಸಗಿ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದನು. ಸ್ಫೋಟದ ಸಮಯದಲ್ಲಿ ಆ ಪ್ರದೇಶದಲ್ಲೇ ಇದ್ದಿದ್ದರಿಂದ ಈ ದುರ್ಘಟನೆ ಸಂಭವಿಸಿದೆ ಎಂದು ಕುಟುಂಬ ಸದಸ್ಯರು ಮಾಹಿತಿ ನೀಡಿದ್ದಾರೆ. ಘಟನೆಯ ಬಳಿಕ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸರು ಸ್ಥಳವನ್ನು ಸುತ್ತುವರೆದು ಭದ್ರತೆ ಹೆಚ್ಚಿಸಿದ್ದಾರೆ.

'ರಾಷ್ಟ್ರೀಯ ಗ್ರಾಹಕರ ದಿನಾಚರಣೆ' ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎ.ಜೆ. ಮಾಲ್ದಾರ

# ಖರೀದಿಯ ವೇಳೆ ಜಾಗ್ರತೆಯಿಂದ ವ್ಯವಹರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಹಕರು ತಾವು ಖರೀದಿಸಿದ ಸಾಮಗ್ರಿಯ ಗುಣಮಟ್ಟ ಅಥವಾ ಪ್ರಮಾಣದಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಆ ಸಂದರ್ಭದಲ್ಲಿ ಡಿಜಿಟಲ್ ನ್ಯಾಯದ ಆ್ಯಪ್ ಮೂಲಕ ಪ್ರಕರಣ ದಾಖಲಿಸಿ ತ್ವರಿತ ಹಾಗೂ ಪರಿಣಾಮಕಾರಿಯಾಗಿ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎ.ಜೆ. ಮಾಲ್ದಾರ ಹೇಳಿದರು.



ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ವಾರ್ತಾ ಮತ್ತು ಸಾ.ಸಂ ಇಲಾಖೆ ಹಾಗೂ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್ ಗದಗ ಇವರ ಸಂಯುಕ್ತಾಶ್ರಯದಲ್ಲಿ ಗದಗ–ಬೆಟಗೇರಿಯ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್ ಆವರಣದ ಸುವರ್ಣ ಮಹೋತ್ಸವ ಭವನದಲ್ಲಿ ಬುಧವಾರ್ನಡೆದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಹಕರು ಯಾವುದೇ ವಸ್ತು ಖರೀದಿಸುವಾಗ ಹಾಗೂ ಸೇವೆ ಪಡೆಯುವಾಗ ಜಾಗೃತೆಯಿಂದ ವ್ಯವಹರಿಸಬೇಕು. ಅದರ ಗುಣಮಟ್ಟ, ಪ್ರಮಾಣ, ವ್ಯಾರಂಟಿ, (expiry date) ಅವಧಿ ಮುಕ್ತಾಯ ಪರಿಶೀಲಿನೆ ಅತ್ಯವಶ್ಯಕವಾಗಿದೆ. ಗ್ರಾಹಕರಿಗೆ ಅನ್ಯಾಯವಾದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಹೇಳಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಯಶೋಧಾ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಗ್ರಾಹಕರುಗಳು ಅತಿವೇಗದಲ್ಲಿ ವ್ಯಾಜ್ಯಗಳನ್ನು ದಾಖಲಿಸಬಹುದು ಹಾಗೂ ಸಂಬಂಧಿತ ವ್ಯಾಜ್ಯದ ಸಾಕ್ಷಿಗಳನ್ನು ಡಿಜಿಟಲ್ ನ್ಯಾಯದ ಆ್ಯಪ್‌ನಲ್ಲಿ ಸಲ್ಲಿಸಬಹುದಾಗಿದೆ. ತ್ವರಿತಗತಿಯಲ್ಲಿ ನ್ಯಾಯ ದೊರಕಿಸಿಕೊಡುವುದೇ ಇದರ ಮೂಲ ಉದ್ದೇಶ ಎಂದರು.

ಇದೇ ಸಂದರ್ಭದಲ್ಲಿ ಕಾನೂನು ಮಾಪನ ಶಾಸ್ತ್ರ ಇಲಾಖೆ ವತಿಯಿಂದ ತೂಕ ಮತ್ತು ಅಳತೆ ಹಾಗೂ ಪೊಟ್ಟಣ ಸಾಮಗ್ರಿಗಳ ವಸ್ತು ಪ್ರದರ್ಶನ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದವರ ವತಿಯಿಂದ ಆಹಾರ ಸುರಕ್ಷತೆ ಹಾಗೂ ಆಹಾರ ಕಲಬೆರಕೆ ಕುರಿತು ಭಿತ್ತಿಚಿತ್ರ ಪ್ರದರ್ಶನ, ಜಿಲ್ಲೆಯ ಗ್ಯಾಸ್ ಏಜೆನ್ಸಿಯವರ ವತಿಯಿಂದ ಎಲ್‌ಪಿಜಿ ಸುರಕ್ಷತೆ ಕುರಿತು ಪ್ರಾತ್ಯಕ್ಷಿಕೆ ಮತ್ತು ಭಿತ್ತಿಚಿತ್ರಗಳ ಪ್ರದರ್ಶನ ನಡೆಯಿತು.

ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ ಮಾತನಾಡಿ, ಪ್ರತಿವರ್ಷ ಡಿ. 24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಆಚರಣೆ ಮಾಡಲಾಗುತ್ತದೆ ಹಾಗೂ ಮಾರ್ಚ್ 15ರಂದು ವಿಶ್ವ ಗ್ರಾಹಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಭಾರತದಲ್ಲಿ ಗ್ರಾಹಕರ ದಿನಾಚರಣೆಯು 1986ರಲ್ಲಿ ಜಾರಿಗೆ ಬಂದಿದೆ. ಸುಪ್ರೀಮ್ ಕೋರ್ಟ್‌ನ ಆದೇಶದಂತೆ ಗ್ರಾಹಕರ ಕುಂದುಕೊರತೆಗಳ ಪರಿಹಾರಕ್ಕಾಗಿ ಇರುವ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಜಿಲ್ಲಾ, ರಾಜ್ಯ, ಕೇಂದ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದರು.

ತಿಮ್ಮಾಪೂರದಲ್ಲಿ ರಾಷ್ಟ್ರೀಯ ರೈತರ ದಿನಾಚರಣೆ, ಕಿಸಾನ್ ಗೋಷ್ಠಿ

# ಕಡಲೆ ಬೆಳೆ ಕ್ಷೇತ್ರೋತ್ಸವ, ಪ್ರಾತ್ಯಕ್ಷಿಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಕೃಷಿ ಇಲಾಖೆ, ಕೃಷಿ ಸಮಾಜ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗ್ರಾಮ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಗದಗ ಜಿಲ್ಲಾ ಮಟ್ಟದ ರಾಷ್ಟ್ರೀಯ ರೈತರ ದಿನಾಚರಣೆ, ಕಿಸಾನ್ ಗೋಷ್ಠಿ, ಕಡಲೆ ಬೆಳೆ ಕ್ಷೇತ್ರೋತ್ಸವ ಹಾಗೂ ಡ್ರೋನ್ ಮೂಲಕ ಬೆಳೆಗಳಿಗೆ ಲಘು ಪೋಷಕಾಂಶಗಳ ಸಿಂಪಡಣೆ ಪ್ರಾತ್ಯಕ್ಷಿಕೆಯನ್ನು ರೈತ ಶರಣಪ್ಪ ಜೋಗಿನ ಅವರ ಜಮೀನಲ್ಲಿ ಗದಗ ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಚೇತನಾ ಪಾಟೀಲ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, ಭಾರತದ 5ನೇ ಪ್ರಧಾನಿ ಚೌದರಿ ಚರಣ್ ಸಿಂಗ್ ಜನ್ಮದಿನಾಚರಣೆ ಅಂಗವಾಗಿ ರಾಷ್ಟ್ರೀಯ ರೈತರ ದಿನಾಚರಣೆಯಾಗಿ ದೇಶಾದ್ಯಂತ ಆಚರಿಸಲಾಗುತ್ತದೆ. ಎಪಿಎಂಸಿ ಮಾರುಕಟ್ಟೆ, ಭೂರಹಿತ ಕೃಷಿ ರೈತರಿಗೆ ಸರ್ಕಾರದಿಂದ ರೈತರಿಗೆ ಹಂಚಿಕೆ ಮಾಡುವಂತೆ ಕೃಷಿಯಲ್ಲಿ ಹೊಸ ಹೊಸ ತಂತ್ರಜ್ಞಾನ ಬಳಕೆ ಪರಿಚಯಿಸುವ ಮೂಲಕ ಕೃಷಿಯಲ್ಲಿ ಕ್ರಾಂತಿಕಾರಕ ಬದಲಾವಣೆಯನ್ನು ತಂದಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ, ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಕೋಟುಮಚಗಿ ಸಾವಯವ ಕೃಷಿಕರಾದ ವೀರೇಶ ನೇಗಲಿ, ಶಂಭುಲಿಂಗ ಶಾಸ್ತ್ರಿಗಳು, ಬೆಟಗೇರಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸವರಾಜೇಶ್ವರಿ ಸಜ್ಜನರ, ಹೇಮಾ ಮೊರಬ, ರಮೇಶ ಜತ್ತಿ, ಕಲಾವತಿ ಕಾಂಬಳೆ, ಹನುಮವ್ವ ತಳವಾರ, ಹುಚ್ಚೀರಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ರಾಮಪ್ಪ ಹಚ್ಚಪ್ಪನವರ, ಭೀಮಪ್ಪ ರಾಮಜಿ, ಮಲ್ಲಪ್ಪ ಇದ್ಲಿ, ಸೀತಾ ಜೋಗಿನ, ಸಾವಿತ್ರಿ ಕೊಪ್ಪದ, ವೆಂಕಟೇಶ ಪೂಜಾರ ಮುಂತಾದವರಿದ್ದರು.

ಗದಗ ಕೃಷಿ ಇಲಾಖೆ ಜಂಟಿ ಉಪ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ಮಾತನಾಡಿ, ಕೃಷಿ ಇಲಾಖೆಯಿಂದ ಈ ವರ್ಷ ರಿಯಾಯಿತಿ ದರದಲ್ಲಿ ಕೊಡಮಾಡಿದ ಬಿಜಿಡಿ 111 ಸುಧಾರಿತ ತಳಿಯ ಬೀಜವನ್ನು ವಿತರಣೆ ಮಾಡಿದ್ದು, ಇದು ಹೆಚ್ಚು ಇಳುವರಿ ಹಾಗೂ ರೋಗನಿರೋಧಕ ಶಕ್ತಿಯನ್ನು ಹೊಂದಿದೆ ಎಂದು ಹೇಳಿದರು.

## ಅತಿಥಿ ಉಪನ್ಯಾಸಕರ ಇಡಗಂಟು ಹಣ ಬಿಡುಗಡೆ : ರಾಜ್ಯ ಸರ್ಕಾರಕ್ಕೆ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಹಾಗೂ ಮರಣ ಹೊಂದಿದ ಅತಿಥಿ ಉಪನ್ಯಾಸಕರುಗಳಿಗೆ ಇಡುಗಂಟು ಯೋಜನೆಯ ಅನುದಾನವನ್ನು ಬಿಡುಗಡೆಗೊಳಿಸಿದ್ದಕ್ಕೆ ಮುಖ್ಯಮಂತ್ರಿಗಳಿಗೆ, ಉಪ ಮುಖ್ಯಮಂತ್ರಿಗಳಿಗೆ, ವಿಧಾನ ಪರಿಷತ್‌ನ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ, ಕಾನೂನು ಸಚಿವರಾದ ಡಾ. ಎಚ್.ಕೆ. ಪಾಟೀಲ ಹಾಗೂ



ವಿಧಾನ ಪರಿಷತ್‌ನ ಎಲ್ಲಾ ಸದಸ್ಯರುಗಳಿಗೆ ರಾಜ್ಯದ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಪರವಾಗಿ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್.ಕಲ್ಮನಿ ಅಭಿನಂದನೆಗಳನ್ನು ತಿಳಿಸಿದ್ದಾರೆ.

ಉನ್ನತ ಶಿಕ್ಷಣ ಸಚಿವರು ನಾನ್ ಯುಜಿಸಿ ಹಾಗೂ ಯುಜಿಸಿ ಎಂಬ ಭೇದಭಾವ ಮಾಡದೆ ಆದಷ್ಟು ಬೇಗ ಸೇವೆ ಸಲ್ಲಿಸಲು ಆದೇಶ ಹೊರಡಿಸಬೇಕು ಎಂದು ಡಾ. ಹನುಮಮಂತಗೌಡ ಆರ್. ಕಲ್ಮನಿ, ರಾಜ್ಯ ಕಾರ್ಯದರ್ಶಿ ಶಶೀಕಲಾ ಜೋಳದ, ವಿ.ಎಂ. ದೇಸಾಯಿಗೌಡರ, ಭಗತ್‌ಸಿಂಗ್ ನವಲೂರಕರ, ಡಾ. ಅಡವೆಪ್ಪ ಇಟಗಿ, ದಾನೇಶ್ವರಿ, ಜಿ. ಪಾರ್ವತಿ ತಾರಿಹಾಳ ಸೇರಿದಂತೆ ರಾಜ್ಯದ ಎಲ್ಲಾ ಅತಿಥಿ ಉಪನ್ಯಾಸಕರು ಸರಕಾರಕ್ಕೆ ಮನವಿ ಮಾಡಿದ್ದಾರೆ.

## ಬಾಂಗ್ಲಾದ ಅಲ್ಪಸಂಖ್ಯಾತ ಹಿಂದೂಗಳಿಗೆ ರಕ್ಷಣೆ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಾಂಗ್ಲಾದಲ್ಲಿರುವ ಅಲ್ಪಸಂಖ್ಯಾತ ಹಿಂದೂಗಳಿಗೆ ಆ ದೇಶ ರಕ್ಷಣೆ ಒದಗಿಸಬೇಕು. ಭಾರತದಲ್ಲಿರುವ ಬಾಂಗ್ಲಾದೇಶದ ರಾಯಬಾರಿ ತುರ್ತು ಸಂದೇಶ ರವಾನಿಸಬೇಕು ಎಂದು ಬಿಜೆಪಿ ಜಿಲ್ಲಾ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಆಗ್ರಹಿಸಿದ್ದಾರೆ.

ಈ ಕುರಿತು ಮಾಧ್ಯಮ ಪತ್ರಿಕಾ ಹೇಳಿಕೆ ನೀಡಿರುವ ಅವರು, ಯಾವುದೇ ದೇಶ ಸಂಕಷ್ಟದಲ್ಲಿದ್ದರೂ ಅದಕ್ಕೆ ಸ್ಪಂದಿಸುವ ಭಾರತ ದೇಶದ ಹಿರಿಮೆಯಾದರೆ, ಅದೇ ದೇಶದ ಮೂಲ ನಿವಾಸಿಗಳು ವಿಭಜಿತ ಬಾಂಗ್ಲಾದೇಶದ ಹಿಂದೂ ಸಮಾಜದ ದೀಪು ಚಂದ್ರದಾಸ ಅವರ ಬರ್ಬರ ಹತ್ಯೆ ಮಾಡಿರುವುದು



ಖಂಡನೀಯ. ಅಪರಾಧಿಗಳನ್ನು ಬಂಧಿಸಿದರೆ ಸಾಲದು, ಅವರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದ್ದಾರೆ.

ಭಾರತದ ವೀರ ಸೈನಿಕರ ಬಲಿದಾನ, ಪರಾಕ್ರಮ ಮತ್ತು ರಾಜತಾಂತ್ರಿಕ ಸಹಕಾರದಿಂದ ಬಾಂಗ್ಲಾದೇಶ ಸ್ವತ್ರಂತ್ರವಾಗಿದೆ ಎನ್ನುವುದನ್ನು ಆ ದೇಶದ ಕೆಲ ಮತಾಂಧರಿಗೆ ಗೊತ್ತಾಗಬೇಕಾಗಿದೆ. ಭಾರತಕ್ಕೆ ಆಸರೆ ಕೇಳಿ ಬಂದ ಆ ದೇಶದ ಮಾಜಿ ಪ್ರಾಧಾನಿಗೆ ಆಶ್ರಯ ನೀಡಿದ್ದು ಭಾರತ. ಬಾಂಗ್ಲಾ ಅಖಂಡ ಭಾರತದ ಭಾಗವಾದರೆ ಇಲ್ಲಿಯ ಮೂಲನಿವಾಸಿ ಹಿಂದೂಗಳೇ ಅಲ್ಲಿ ಅಲ್ಪಸಂಖ್ಯಾತರಾಗಿ ಅವರನ್ನು ಮಾರಣ ಹೋಮ ಮಾಡುತ್ತಿರುವ ಆ ದೇಶದ ಬಹುಸಂಖ್ಯಾತರ ಕೃತ್ಯ ಖಂಡನೀಯ. ಪ್ರತಿಸಾರಿ ಒಂದಿಲ್ಲೊಂದು ಕಾರಣವಿಟ್ಟು ಅಲ್ಲಿಯ ಹಿಂದೂಗಳಿಗೆ ತೆ–ಊಂದರೆ ನೀಡುತ್ತಿರುವುದನ್ನು ನಿಲ್ಲಿಸಿ ಹಿಂದೂಗಳಿಗೆ ರಕ್ಷಣೆ ನೀಡುವ ತುರ್ತು ಸಂದೇಶ ರವಾನಿಸಬೇಕು ಎಂದು ಆಗ್ರಹಿಸಿದ್ದಾರೆ.

## ಮೈಸೂರು | ಚಳಿಯಲ್ಲೂ ತಣ್ಣಗಾಗದ ಕುರ್ಚಿ ಕದನ; ಸಿದ್ದರಾಮಯ್ಯ ಬೆಂಬಲಕ್ಕೆ ಅಹಿಂದ ಕಹಳೆ!

■ವಿಜಯಸಾಕ್ಷಿ ಸುದ್ದಿ, ಮೈಸೂರು

ಮೈಕೊರೆಯುವ ಚಳಿಯ ನಡುವೆಯೂ ರಾಜ್ಯ ರಾಜಕಾರಣದಲ್ಲಿ ಕುರ್ಚಿ ಕದನದ ಕಾವು ಜೋರಾಗಿದೆ.

ಜನವರಿ 6ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುದೀರ್ಘ ಅವಧಿಯ ಸಿಎಂ ಎಂಬ ದಾಖಲೆಗೆ ಸಹಿ ಹಾಕಲಿರುವ ಹೊತ್ತಲ್ಲೇ, ನಾಯಕತ್ವ ಬದಲಾವಣೆ ನಿರೀಕ್ಷೆಯಲ್ಲಿ ಡಿಕೆ ಶಿವಕುಮಾರ್ ಬಣ ಕಾದು ಕುಳಿತಿದೆ. ಈ ನಡುವೆ ಸಿದ್ದರಾಮಯ್ಯಗೆ ಬಲ ತುಂಬುವ ಉದ್ದೇಶದಿಂದ ಅವರ ತವರು ಜಿಲ್ಲೆಯಲ್ಲೇ ಅಹಿಂದ ಕಹಳೆ ಮೊಳಗಲು ಸಜ್ಜಾಗಿದೆ.

ಜನವರಿ 25ರಂದು ಮೈಸೂರಿನಲ್ಲಿ ಅಹಿಂದ ಸಮಾವೇಶ ನಡೆಯಲಿದ್ದು, ಮುಖ್ಯಮಂತ್ರಿ ಬದಲಾವಣೆ ಆಗಬಾರದು ಎಂಬ ಸಂದೇಶವನ್ನು ಬಲವಾಗಿ ತಲುಪಿಸುವ ಉದ್ದೇಶ ಈ ಸಮಾವೇಶದ ಹಿಂದಿದೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತಿ ವೇದಿಕೆ ವತಿಯಿಂದ ಈಗಾಗಲೇ ಮೈಸೂರಿನಲ್ಲಿ ಪೂರ್ವಭಾವಿ ಸಭೆ ನಡೆಸಲಾಗಿದ್ದು, ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಸಮಾವೇಶ ಆಯೋಜಿಸಲು ನಿರ್ಧರಿಸಲಾಗಿದೆ.

ಅಹಿಂದ ಸಮಾವೇಶಕ್ಕೆ ಸುಮಾರು 15 ರಿಂದ 20 ಸಾವಿರ ಜನರನ್ನು ಸೇರಿಸುವ ಪ್ಲ್ಯಾನ್ ಮಾಡಲಾಗಿದೆ. ಗಮನಾರ್ಹವಾಗಿ, ಈ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇರವಾಗಿ ಭಾಗವಹಿಸುವುದಿಲ್ಲ.




ಹರಪನಹಳ್ಳಿಯಲ್ಲಿ ವಿಶ್ವ ವಿಕಲಚೇತನರ ದಿನಾಚರಣೆಯ ಪ್ರಯುಕ್ತ ತಾ.ಪಂ ಅವರಣದಲ್ಲಿ ಬೈಕ್ ರ್‍ಯಾಲಿಗೆ ತಾ.ಪಂ ಇಒ ಚಂದ್ರಶೇಖರ್ ವೈ.ಎಚ್ ಚಾಲನೆ ನೀಡಿದರು. ಈ ವೇಳೆ ನಗರಸಭೆ ಪೌರಾಯುಕ್ತೆ ರೇಣುಕಾ ಎಸ್.ದೇಸಾಯಿ, ಪುರಸಭೆ ಮಾಜಿ ಸದಸ್ಯರಾದ ಅಬ್ದುಲ್ ರೆಹಮಾನ್ ಸಾಬ್, ವೆಂಕಟೇಶ್ ವಕೀಲರು, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ವೀರಣ್ಣ ಲಕ್ಕಣ್ಣನವರ್, ಧನರಾಜ್, ದುರುಗೇಶ್ ಜಾಲಗಾರ್, ಹೆಚ್. ಪರಶುರಾಮ್, ಬಸವರಾಜ್ ಸೇರಿದಂತೆ ಮುಂತಾದವರಿದ್ದರು.

## ತ್ಯಾಜ್ಯ ನಿರ್ವಹಣೆ ಕುರಿತು ಜಾಗೃತಿ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಚ್ಛ ಭಾರತ ಮಿಷನ್–2.0 ಅಡಿಯಲ್ಲಿ ಗದಗ–ಬೆಟಗೇರಿ ನಗರಸಭೆ ವತಿಯಿಂದ ಘನ ತ್ಯಾಜ್ಯ ನಿರ್ವಹಣೆ ಕುರಿತು ಸ್ವಚ್ಛತಾ ಇ–ಸೇವಾ ಯೋಜನೆ ಅಡಿಯಲ್ಲಿ ಗದಗ–ಬೆಟಗೇರಿ ಅವಳಿ ನಗರದ ವಾರ್ಡ್ ನಂ. 23ರ ಸರ್ಕಲ್‌ನಲ್ಲಿ ಸ್ಮಾರ್ಟ್ ಪಾಯಿಂಟ್ ಆಗಿ ಪರಿವರ್ತಿಸುವುದು, ಹಸಿ ಕಸ–ಒಣ ಕಸವನ್ನು ಬೇರ್ಪಡಿಸುವುದರ ಕುರಿತು ಸಾರ್ವಜನಿಕರಿಗೆ ಹಾಗೂ ಅಂಗಡಿ ಮಾಲಕರಿಗೆ ಮನವರಿಕೆ ಮಾಡಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ನಗರಸಭೆ ಸದಸ್ಯರಾದ ಬರಕತಅಲಿ ಮುಲ್ಲಾ, ಜಿಲ್ಲಾ ಕುರುಬ ಸಮಾಜದ ಅಧ್ಯಕ್ಷ ಫಕೀರಪ್ಪ ಹೆಬಸೂರ, ನಾಗಪ್ಪ ಗುಗ್ಗರಿ, ಶಾಲಾ ಮಕ್ಕಳು, ಶಿಕ್ಷಕರು ಉಪಸ್ಥಿತರಿದ್ದರು.

ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರಾದ ರಾಜಾರಾಮ ಪವಾರ, ನಗರಸಭೆ ಪರಿಸರ ಅಭಿಯಂತರ ಆನಂದ್ ಬದಿ, ಆರೋಗ್ಯ ಅಧಿಕಾರಿಗಳಾದ ಎಂ.ಎಂ. ಮಕಾನದಾರ, ಸೂಪರ್‌ವೈಸರ್ ಸಿ.ಆರ್. ಹಾದಿಮನಿ, ಸಣ್ಣಪ್ಪ ಬೋಳಮನವರ್, ಟ್ರ್ಯಾಕ್ಟರ್ ಚಾಲಕರು, ಪೌರ ಕಾರ್ಮಿಕರು, ಸ್ವಸಹಾಯ ಗುಂಪುಗಳ ಸದಸ್ಯರು, ಸಾರ್ವಜನಿಕರು, ಕಮ್ಯುನಿಟಿ ಮುಬಲೈಸರ್ ನಾಗಮ್ಮ ಬಳ್ಳಾರಿ, ವಸಂತಲಕ್ಷ್ಮೀ ರಾಮಗಿರಿ ಮುಂತಾದವರು ಉಪಸ್ಥಿತರಿದ್ದರು.

## ನಿಧನ

### ರಾಘವೇಂದ್ರ ಕೃಷ್ಣ ಕೊಪ್ಪರ



**ಧಾರವಾಡ:** ನಗರದ ನಾರಾಯಣಪುರದ ನಿವಾಸಿ ರಾಘವೇಂದ್ರ ಕೃಷ್ಣ ಕೊಪ್ಪರ(83) ಇವರು 24–12–2025 ರಂದು ಬೆಂಗಳೂರಿನಲ್ಲಿ ನಿಧನ ಹೊಂದಿದರು. ಆರ್. ಕೆ. ಕೊಪ್ಪರ್ ಅವರು ಇಬ್ಬರು ಪುತ್ರರು ಮತ್ತು ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

**ಸಚಿವ ಎಚ್.ಕೆ.ಪಾಟೀಲ ಸಂತಾಪ :** ಜೆ.ಎಸ್.ಎಸ್.ಕಾಲೇಜಿನ ನಿವೃತ್ತ ಪ್ರಾಧ್ಯಾಪಕ, ಶಿಕ್ಷಣ ತಜ್ಞ, ಕರ್ನಾಟಕ ವಿಶ್ವವಿದ್ಯಾಲಯ ಸಿನೆಟ್ ಸದ್ಯರಾಗಿದ್ದ ಪ್ರೊ. ಆರ್.ಕೆ.ಕೊಪ್ಪರ ನಿಧನಕ್ಕೆ ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅತೀವ ಶೋಕ ವ್ಯಕ್ತಪಡಿಸಿದ್ದಾರೆ. ಶೈಕ್ಷಣಿಕ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಕೊಪ್ಪರ ಅವರ ಅಗಲುವಿಕೆಯಿಂದಾಗಿ ಧಾರವಾಡ ಸಾರಸ್ವತ ಲೋಕಕ್ಕೆ ತುಂಬಲಾರದ ನಷ್ಟ. ವೈಯಕ್ತಿಕವಾಗಿ ಒಬ್ಬ ಹಿತೈಷಿಯನ್ನು ಕಳೆದುಕೊಂಡತಾಗಿದೆ ಎಂದು ದುಃಖಿಸಿದ್ದಾರೆ.

ಅವರ ಅಗಲುವಿಕೆಯಿಂದ ದುಃಖ ಸಹಿಸುವ ಶಕ್ತಿಯನ್ನು ದೇವರು ಅವರ ಕುಟುಂಬ ಸದಸ್ಯರಿಗೆ ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

## ತಪ್ಪಿತಸ್ಥರನ್ನು ಬಂಧಿಸಿ, ಶಿಕ್ಷೆ ವಿಧಿಸಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹುಬ್ಬಳ್ಳಿ ತಾಲೂಕಿನ ಇನಾಂ ವೀರಾಪುರ ಗ್ರಾಮದಲ್ಲಿ ಇತ್ತೀಚೆಗೆ ನಡೆದ ಗರ್ಭಿಣಿ ಯುವತಿ ಮಾನ್ಯಳ ಮರ್ಯಾದೆಗೇಡು ಹತ್ಯೆ, ದಲಿತ ಕುಟುಂಬದ ಮೇಲೆ ಮಾರಣಾಂತಿಕ ಹಲ್ಲೆ ಖಂಡಿಸಿ, ಎಲ್ಲಾ ತಪ್ಪತಸ್ಥರನ್ನು ಬಂಧಿಸಿ ಕಠಿಣ ಶಿಕ್ಷೆ ನೀಡಲು ಆಗ್ರಹಿಸಿ ಧಾರವಾಡದ ವಿವಿಧ ಜನಪರ ಸಂಘಟನೆಗಳಿಂದ ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ, ಸಿಐಟಿಯು ರಾಜ್ಯ ಕಾರ್ಯದರ್ಶಿ ಮಹೇಶ ಪತ್ತಾರ, ಮಹಿಳಾ ದೌರ್ಜನ್ಯ ವಿರೋಧಿ ವೇದಿಕೆಯ ಪ್ರಭಾವತಿ ದೇಸಾಯಿ, ಸಾಧನಾ ಮಾನವ ಹಕ್ಕುಗಳ ವೇದಿಕೆಯ ಮುಖ್ಯಸ್ಥೆ ಡಾ. ಇಸಾಬೆಲ್ಲಾ ಝೇವಿಯರ್, ಖ್ಯಾತ ಕಲಾವಿದೆ ವಿಶ್ವೇಶ್ವರಿ ಹಿರೇಮಠ, ಎಸ್‌ಎಫ್‌ಐ ಜಿಲ್ಲಾಧ್ಯಕ್ಷ ನಾಗರಾಜ ಚಲವಾದಿ, ರೈತ ಮುಖಂಡ ರವಿರಾಜ ಕಂಬಳಿ ಮರ್ಯಾದೆಗೇಡು ಹತ್ಯೆ ಖಂಡಿಸಿ ಮಾತನಾಡಿದರು.

ಪ್ರತಿಭಟನೆಯಲ್ಲಿ ಒಂಟಿ ಮಹಿಳೆಯರ ಸಂಘದ ಜಿಲ್ಲಾಧ್ಯಕ್ಷೆ ಮಂಜುಳಾ ಪವಾರ, ಪ್ರಮಿಳಾ ಜಕ್ಕಣ್ಣವರ, ಬಿ.ಎನ್. ಪೂಜಾರಿ, ಲಿನೆಟ್ ಡಿಸೇಲ್ವ, ಸುಹಾಸಿನಿ, ಎ.ಎಂ. ಖಾನ್, ಎಚ್.ಜಿ. ದೇಸಾಯಿ, ಸಂಗೀತಾ ಗೌಡ, ಗುರುಸಿದ್ದಪ್ಪ ಅಂಬಿಗೇರ, ರಾಘವೇಂದ್ರ ಪಾಟೀಲ, ಪರಶುರಾಮ ಮಂದಾರ, ಶ್ರೀನಿವಾಸ ನಾಯಕ, ಸರ್ವೇಶ ಕಂಬದಾಳ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka